ಸಂಪುಟ : 11 ಸಂಚಿಕೆ: 25 ಪುಟ : 4+2 ಬೆಲೆ: 3.00 ರವಿವಾರ ಫೆಬ್ರವರಿ 22 2026 Mob : 9448326533- 9019256545 ಗದಗ

ಸಂಪಾದಕರು : ಎಚ್.ಎಮ್. ಶರೀಫನವರ್

# ವಿಜಯ ಸಾಕ್ಷಿ

ವಾಸ್ತವ, ವಸ್ತುನಿಷ್ಠ, ವಿಭಿನ್ನ... VIJAYASAKSHI KANNADA DAILY ಕನ್ನಡ ದಿನಪತ್ರಿಕೆ




Volume : 11 Issue : 25 Pages : 4+2 Price : 3.00 Sunday February 22 2026 Gadag RNINo:KARKAN/2015/63412 E-mail: vijayasakshidaily@gmail.com Post Regn.No:GDG/72/2023-25

### ಬೆಳಗಾವಿ ವಿಭಾಗ ಮಟ್ಟದ ತಾಂತ್ರಿಕ ಸಮ್ಮೇಳನಕ್ಕೆ ಸಚಿವ ಡಾ. ಎಚ್.ಕೆ. ಪಾಟೀಲ ಚಾಲನೆ

# ರೈತರ ಆರ್ಥಿಕ ಪ್ರಗತಿಗೆ ಅತ್ಯಾಧುನಿಕ ಹೈನುಗಾರಿಕೆ ಪರಿಹಾರ

**■ವಿಜಯಸಾಕ್ಷಿ ಸುದ್ದಿ, ಗದಗ**

ಪಶು ಸಂಗೋಪನೆ ಮತ್ತು ಪ್ರಾಣಿ ಕಲ್ಯಾಣ ಕ್ಷೇತ್ರದಲ್ಲಿ ಸಮಗ್ರ ಅಭಿವೃದ್ಧಿಗೆ ತಾಂತ್ರಿಕ ಜ್ಞಾನ ವಿನಿಮಯ ಅತ್ಯಗತ್ಯ ಎಂದು ರಾಜ್ಯದ ಕಾನೂನು, ನ್ಯಾಯ ಹಾಗೂ ಮಾನವ ಹಕ್ಕುಗಳು, ಸಂಸದೀಯ ವ್ಯವಹಾರಗಳು, ಶಾಸನ ರಚನೆ ಮತ್ತು ಪ್ರವಾಸೋದ್ಯಮ ಸಚಿವರು ಹಾಗೂ ಗದಗ ಜಿಲ್ಲಾ ಉಸ್ತುವಾರಿ ಸಚಿವ ಡಾ. ಎಚ್.ಕೆ. ಪಾಟೀಲ ಅಭಿಪ್ರಾಯಪಟ್ಟರು.

ನಾಗಾವಿಯ ಮಹಾತ್ಮ ಗಾಂಧಿ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ವಿಶ್ವ ವಿದ್ಯಾಲಯ-ಗ್ರಾಮ ಗಂಗೋತ್ರಿಯ ಆವರಣದಲ್ಲಿ ಗದಗ ಜಿಲ್ಲಾ ಪಂಚಾಯಿತಿ, ಪಶುಪಾಲನಾ ಮತ್ತು ಪಶು ವೈದ್ಯಕೀಯ ಸೇವಾ ಇಲಾಖೆ, ಕರ್ನಾಟಕ ಪ್ರಾಣಿ ಕಲ್ಯಾಣ ಮಂಡಳಿ (ಬೆಂಗಳೂರು), ಕರ್ನಾಟಕ ಪಶು ವೈದ್ಯಕೀಯ ಸಂಘ (ಗದಗ) ಹಾಗೂ ಹ್ಯೂಮನ್ ವರ್ಲ್ಡ್ ಫಾರ್ ಅನಿಮಲ್ಸ್ ಇಂಡಿಯಾ ಫೌಂಡೇಶನ್ ಸಂಯುಕ್ತ ಆಶ್ರಯದಲ್ಲಿ 2025-26ನೇ ಸಾಲಿನ ಪಶು ಸಂಗೋಪನೆ ಹಾಗೂ ಪ್ರಾಣಿ ಕಲ್ಯಾಣ ಮಾಸಾಚರಣೆ ಅಂಗವಾಗಿ ಬೆಳಗಾವಿ ವಿಭಾಗ ಮಟ್ಟದ ತಾಂತ್ರಿಕ ಸಮ್ಮೇಳನವನ್ನು ಶನಿವಾರ ಉದ್ಘಾಟಿಸಿ ಅವರು ಮಾತನಾಡಿದರು.

ಹೈನುಗಾರಿಕೆ ಕ್ಷೇತ್ರದ ಅಭಿವೃದ್ಧಿ ಕಡಿಮೆಯಾಗಿರುವುದೇ ಗ್ರಾಮೀಣ ಭಾಗದ ಸಂಪತ್ತು ವೃದ್ಧಿಯಾಗದೀರಲು ಕಾರಣ. ದೇಶದ ಸಂಪತ್ತು ವೃದ್ಧಿಯಲ್ಲಿ ಹೈನುಗಾರಿಕೆ ಪ್ರಭಾವ ಅಧಿಕವೆಂದು ಅರಿತು, ತಾಂತ್ರಿಕತೆ ಬಳಸಿ ಅಭಿವೃದ್ಧಿಯೆಡೆಗೆ ಸಾಗಬೇಕಿದೆ. ಆರೋಗ್ಯ, ತಂತ್ರಜ್ಞಾನ ಹಾಗೂ ಕೃಷಿ ಕೇತ್ರಕ್ಕೆ ನೀಡುವಷ್ಟು ಪ್ರಾಮುಖ್ಯತೆ ಹೈನುಗಾರಿಕೆ ಕ್ಷೇತ್ರಕ್ಕೂ ನೀಡಿದ್ದರೆ, ಇಂದು ರೈತರ ಸಂಪತ್ತು ಅಧಿಕವಾಗುತ್ತಿತ್ತು. ರೈತರ ಆರ್ಥಿಕ ಪ್ರಗತಿಗೆ ಅತ್ಯಾಧುನಿಕ ಹೈನುಗಾರಿಕೆ ಪರಿಹಾರವಾಗಿದೆ. ಗ್ರಾಮೀಣ ಭಾಗದಲ್ಲಿ ಹೈನುಗಾರಿಕೆ ಲಾಭವಾಗಿಸಲು ತಾಂತ್ರಿಕತೆ ಅಳವಡಿಕೆ ಅನಿವಾರ್ಯ ಎಂದು ಸಚಿವ ಪಾಟೀಲ ತಿಳಿಸಿದರು.



ವಿಧಾನ ಪರಿಷತ್ ಸದಸ್ಯ ಎಸ್.ವಿ. ಸಂಕನೂರ ಮುಖ್ಯ ಅತಿಥಿಗಳಾಗಿ ಪಾಲ್ಗೊಂಡು ಮಾತನಾಡಿ, ಇಂದು ವಿಜ್ಞಾನ ತಂತ್ರಜ್ಞಾನ ಬಹಳಷ್ಟು ಮುಂದುವರೆದಿದೆ. ರಾಜ್ಯ ಕೇಂದ್ರ ಸರ್ಕಾರಗಳು ಸಂಶೋಧನೆ ಸಾಕಷ್ಟು ಪ್ರಮಾಣದಲ್ಲಿ ಅನುದಾನ ನೀಡುತ್ತಿವೆ. ಅದು ಸರಿಯಾಗಿ ಸದ್ಬಳಕೆ ಆಗಲಿ ಎಂದರು.

ಈ ಸಮ್ಮೇಳನದಲ್ಲಿ ಜ್ಞಾನ-ತಂತ್ರಜ್ಞಾನ ವಿನಿಮಯವಾಗಿ ಅದು ಸರಿಯಾಗಿ ಅನುಷ್ಠಾನ ಆಗಲಿ. ಕುರಿ, ಕೋಳಿ ಸೇರಿದಂತೆ ಹೈನುಗಾರಿಕೆ ಮೂಲಕ ತಂತ್ರಜ್ಞಾನ ಬಳಸಿ ಹೇಗೆ ಲಾಭದಾಯಕ ಮಾಡಬಹುದು ಎಂಬ ಕುರಿತು ಚರ್ಚೆಯಾಗಲಿ.

ಪಶುಪಾಲನಾ ಮತ್ತು ಪಶು ವೈದ್ಯಕೀಯ ಸೇವಾ ಇಲಾಖೆಯ ನಿರ್ದೇಶಕ ಡಾ. ಪಿ. ಶ್ರೀನಿವಾಸ, ವಿಶ್ವವಿದ್ಯಾಲಯದ ಕುಲಪತಿಗಳು (ಪ್ರಭಾರ) ಹಾಗೂ ಕುಲಸಚಿವ ಪ್ರೊ. ಡಾ. ಸುರೇಶ್ ವಿ.ನಾಡಗೌಡರ, ಕರ್ನಾಟಕ ಪಶು ವೈದ್ಯಕೀಯ ಸಂಘದ ಅಧ್ಯಕ್ಷ ಡಾ. ಎಸ್.ಜಿ. ಯಲಗೋಡ, ಪಶು ವೈದ್ಯಕೀಯ ಮಹಾವಿದ್ಯಾಲಯದ ಡೀನ್ ಡಾ. ಬಿ. ರಾಮಚಂದ್ರ, ಭಾರತ ಸರಕಾರದ ಮಾಜಿ ಪಶು ಸಂಗೋಪನಾ ಆಯುಕ್ತರು ಹಾಗೂ ಬೀದರ ಕೆವಿಎಫ್ಎಸ್‌ಯು ಉಪಕುಲಪತಿ ಡಾ. ಸುರೇಶ್ ಎಸ್. ಹೊನ್ನಪ್ಪಗೋಳ, ಪಶು ವೈದ್ಯಕೀಯ ಸೂಕ್ಷ್ಮ ಜೀವ ವಿಜ್ಞಾನ ವಿಭಾಗದ ಪ್ರಾಧ್ಯಾಪಕರು ಹಾಗೂ ಬೆಂಗಳೂರು ಪ್ರಯೋಗಾಲಯದ ಮುಖ್ಯಸ್ಥರಾದ ಶ್ರೀಕೃಷ್ಣ ಇಸ್ಲೂರ, ಹ್ಯೂಮನ್ ವರ್ಲ್ಡ್ ಫಾರ್ ಅನಿಮಲ್ಸ್ ಇಂಡಿಯಾ ಫೌಂಡೇಶನ್ ಪ್ರತಿನಿಧಿ ರಮೇಶ್ ಭಜಂತ್ರಿ ಸೇರಿದಂತೆ ಹಲವರು ಉಪಸ್ಥಿತರಿದ್ದರು.

ಪಶುಪಾಲನಾ ಮತ್ತು ಪಶು ವೈದ್ಯಕೀಯ ಸೇವಾ ಇಲಾಖೆಯ ಜಂಟಿ ನಿರ್ದೇಶಕ (ರಾಜ್ಯ ವಲಯ) ಡಾ. ಎಚ್. ನಾಗರಾಜ ಸೇರಿದಂತೆ ಹಲವು ಅಧಿಕಾರಿಗಳು ಮತ್ತು ತಜ್ಞರು ಕಾರ್ಯಕ್ರಮದಲ್ಲಿ ಭಾಗವಹಿಸಿದ್ದರು. ಗದಗ ಉಪನಿರ್ದೇಶಕ ಡಾ. ಎಚ್.ಬಿ. ಹುಲಗಣ್ಣವರ ಅತಿಥಿಗಳನ್ನು ಸ್ವಾಗತಿಸಿದರು. ಕರ್ನಾಟಕ ಪಶು ವೈದ್ಯಕೀಯ ಸಂಘದ ಅಧ್ಯಕ್ಷ ಡಾ. ಆರ್.ವೈ. ಗುರಿಕಾರ ಪ್ರಾಸ್ತಾವಿಕ ಮಾತುಗಳನ್ನಾಡಿದರು. ಪ್ರೊ. ಬಾಹುಬಲಿ ಜೈನರ ನಿರ್ವಹಿಸಿದರು.

> ಪಶುಪಾಲನಾ ಕ್ಷೇತ್ರ ಗ್ರಾಮೀಣ ಆರ್ಥಿಕತೆಯ ಬೆನ್ನೆಲುಬಾಗಿದ್ದು, ವೈಜ್ಞಾನಿಕ ಪದ್ಧತಿ, ಹೊಸ ತಂತ್ರಜ್ಞಾನ ಮತ್ತು ಪ್ರಾಣಿ ಕಲ್ಯಾಣದ ಮೌಲ್ಯಗಳನ್ನು ಸಮನ್ವಯಗೊಳಿಸುವ ಮೂಲಕ ರೈತರ ಆದಾಯವನ್ನು ಹೆಚ್ಚಿಸಬಹುದು. ಉತ್ತರ ಕರ್ನಾಟಕ ಭಾಗದಲ್ಲಿ ಹೈನುಗಾರಿಕೆ ಕ್ಷೇತ್ರದ ಬೆಳವಣಿಗೆ ನಿಧಾನಗತಿಯಲ್ಲಿ ಸಾಗಿದೆ. ರಾಜ್ಯದ ಕೋಲಾರ, ಮಂಡ್ಯ ಸೇರಿದಂತೆ ಮಹಾರಾಷ್ಟ್ರ ರಾಜ್ಯದಲ್ಲಿ ಹೈನುಗಾರಿಕೆ ರೈತರಿಗೆಲ್ಲ ಲಾಭದಾಯಕ ಕಸುಬಾಗಿದೆ. ಅವರಿಗೆ ಸಾಧ್ಯವಾಗಿದ್ದು ಇಲ್ಲಿ ಏಕೆ ಸಾಧ್ಯವಾಗಿಲ್ಲ ಎಂಬ ಚರ್ಚೆಯಾಗಲಿ.
>
> **– ಎಚ್.ಕೆ. ಪಾಟೀಲ.**
> ಜಿಲ್ಲಾ ಉಸ್ತುವಾರಿ ಸಚಿವರು.

### ಲಿಂ. ಡಾ. ತೋಂಟದ ಸಿದ್ಧಲಿಂಗ ಮಹಾಸ್ವಾಮಿಗಳ ಜಯಂತಿ ಅಂಗವಾಗಿ ಭಾವೈಕ್ಯತಾ ದಿನಾಚರಣೆಯಲ್ಲಿ ಸಚಿವ ಎಚ್.ಕೆ. ಪಾಟೀಲ

# ವಚನಗಳಿಗೆ ಕಾನೂನಾತ್ಮಕ ಸಶಕ್ತೀಕರಣಕ್ಕೆ ಸರ್ಕಾರದ ಚಿಂತನೆ




> ಹಿರಿಯ ಸಾಹಿತಿಗಳಾದ ಸಿದ್ಧಲಿಂಗ ಪಟ್ಟಣಶೆಟ್ಟಿ ಮಾತನಾಡಿ, ಸಿದ್ಧಲಿಂಗ ಮಹಾಸ್ವಾಮಿಗಳ ಪೂರ್ವಾಶ್ರಮದ ಹೆಸರು ಸಿದ್ಧರಾಮ, ಇಂದಿನ ನಮ್ಮ ಪೂಜ್ಯರ ಹೆಸರು ಸಿದ್ಧರಾಮ ಮಹಾಸ್ವಾಮಿಗಳು, ಹೀಗೆ ಲಿಂಗೈಕ್ಯ ಗುರುಗಳ ಪ್ರತಿರೂಪವೇ ಇಂದಿನ ಶ್ರೀಗಳಾಗಿದ್ದಾರೆ. ಲಿಂಗೈಕ್ಯ ಸಿದ್ಧಲಿಂಗ ಶ್ರೀಗಳ ಅನನ್ಯ ಪ್ರೀತಿ ಹಾಗೂ ಕೃಪಾಶೀರ್ವಾದಕ್ಕೆ ನಾನು ಪಾತ್ರನಾಗಿದ್ದೇನೆ. ಅವರ ಪಟ್ಟಾಧಿಕಾರ ರಜತ ಮಹೋತ್ಸವ ಸಮಾರಂಭದಲ್ಲಿ ನನ್ನಿಂದ 'ಕಲ್ಯಾಣದ ಹಾದಿ' ಗ್ರಂಥವನ್ನು ಬರೆಯಿಸಿದರು. ಇಂದಿನ ಅವರ ಜಯಂತಿಯಲ್ಲಿ ನನ್ನ ಕುರಿತು ಪುಸ್ತಕ ಬಿಡುಗಡೆಯಾಗುತ್ತಿರುವುದು ನನ್ನ ಸೌಭಾಗ್ಯವಾಗಿದೆ ಎಂದರು.

**■ವಿಜಯಸಾಕ್ಷಿ ಸುದ್ದಿ, ಗದಗ**

ಬಸವಾದಿ ಶರಣರ ವಚನಗಳು ಸಾರ್ವತ್ರಿಕ ಮನ್ನಣೆ ಪಡೆದಿರುವ ಮೌಲ್ಯಗಳಾಗಿದ್ದು, ಸಮಾಜದಲ್ಲಿ ಇವುಗಳು ಪರಿಣಾಮಕಾರಿಯಾಗಿ ಅನುಷ್ಠಾನಕ್ಕೆ ಬರುವ ನಿಟ್ಟಿನಲ್ಲಿ ವಚನಗಳಿಗೆ ಕಾನೂನಿನ ಬಲ ತಂದು ಅವುಗಳನ್ನು ಸಶಕ್ತೀಕರಣಗೊಳಿಸಲು ರಾಜ್ಯ ಸರ್ಕಾರ ಚಿಂತನೆ ನಡೆಸಿದೆ ಎಂದು ಕಾನೂನು, ಸಂಸದೀಯ ವ್ಯವಹಾರಗಳು ಹಾಗೂ ಪ್ರವಾಸೋದ್ಯಮ ಸಚಿವರಾದ ಎಚ್.ಕೆ. ಪಾಟೀಲ ನುಡಿದರು.

ಅವರು ಶನಿವಾರ ನಗರದ ತೋಂಟದಾರ್ಯ ಮಠದಲ್ಲಿ ಕನ್ನಡದ ಜಗದ್ಗುರುಗಳು ಹಾಗೂ ಬಸವತತ್ವದ ದಂಡನಾಯಕರಾಗಿದ್ದ ಲಿಂ. ಡಾ. ತೋಂಟದ ಸಿದ್ಧಲಿಂಗ ಮಹಾಸ್ವಾಮಿಗಳ 77ನೇ ಜಯಂತಿ ಅಂಗವಾಗಿ ಭಾವೈಕ್ಯತಾ ದಿನಾಚರಣೆ, ಗ್ರಂಥಗಳ ಬಿಡುಗಡೆ, ವಚನ ಪಾಠಶಾಲೆ ಉದ್ಘಾಟನೆ ಮತ್ತು ಸಂಮಾನ ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿ ಮಾತನಾಡಿದರು.

ಇಂದು ಡಾ. ತೋಂಟದ ಸಿದ್ಧಲಿಂಗ ಮಹಾಸ್ವಾಮಿಗಳು ನಮ್ಮ ನಡುವೆ ಇದ್ದರೆ ರಾಜ್ಯ ಸರ್ಕಾರ ವಚನಗಳಿಗೆ ಕಾನೂನಿನ ಬಲ ತುಂಬಲು ಹೊರಟಿರುವ ನಡೆಯನ್ನು ಖಂಡಿತ ಶ್ಲಾಘಿಸುತ್ತಿದ್ದರು. ಬಸವತತ್ವಗಳ ಕಟ್ಟುನಿಟ್ಟಿನ ಪರಿಪಾಲಕರಾಗಿದ್ದ ಲಿಂಗೈಕ್ಯ ಸಿದ್ಧಲಿಂಗ ಶ್ರೀಗಳು ತೋಂಟದಾರ್ಯ ಮಠದ ಜಾತ್ರೆಗೆ ಹೊಸ ಭಾಷ್ಯ ಬರೆದು ಜಾತ್ರೆಗಳನ್ನು ಜನೋಪಯೋಗಿ ಹಾಗೂ ಸಮಾಜಮುಖಿಯಾಗಿ ಆಚರಿಸುವ ಪರಂಪರೆ ಹಾಕಿಕೊಟ್ಟರು. ಪುಸ್ತಕಗಳನ್ನು ಪ್ರಕಟಿಸುವ, ಹಂಚುವ ಮುಖೇನ ಕೇವಲ ಧಾರ್ಮಿಕತೆಗೆ ಸೀಮಿತವಾಗಿದ್ದ ಜಾತ್ರೆಗಳನ್ನು ಸಾಂಸ್ಕೃತಿಕವಾಗಿ ಮಾರ್ಪಡಿಸಿದರು. ಇಂದಿನ ಡಾ. ತೋಂಟದ ಸಿದ್ಧರಾಮ ಮಹಾಸ್ವಾಮಿಗಳು ಸಹ ಅದೇ ಪರಂಪರೆಯನ್ನು ಮುಂದುವರೆಸಿದ್ದು, ಇಂದು ಹೆಸರಾಂತ ಸಾಹಿತಿಗಳಾದ ಸಿದ್ಧಲಿಂಗ ಪಟ್ಟಣಶೆಟ್ಟಿಯವರ ಕುರಿತ ಗ್ರಂಥಗಳನ್ನು ಬಿಡುಗಡೆ ಮಾಡುವ ಭಾಗ್ಯ ನನಗೆ ದೊರೆತಿದೆ ಎಂದರು.

ವಿಧಾನ ಪರಿಷತ್ ಸದಸ್ಯರಾದ ಎಸ್.ವಿ. ಸಂಕನೂರ ಮಾತನಾಡಿ, ಸಿದ್ಧಲಿಂಗ ಶ್ರೀಗಳು ತಮ್ಮ ಸಾಧನೆಗಳೊಂದಿಗೆ ಅಜರಾಮರರಾಗಿದ್ದಾರೆ. ಶ್ರೀಮಠದ ಪೀಠಕ್ಕೆ ಬಂದಾಗಿನಿಂದ ಅವರು ಲಿಂಗೈಕ್ಯರಾಗುವವರೆಗೆ ಅವರ ಸಾಧನೆಗಳು ಅಪರಿಮಿತವಾಗಿದ್ದು, ನೂರಾರು ಶಿಕ್ಷಣ ಸಂಸ್ಥೆಗಳನ್ನು ಸ್ಥಾಪಿಸಿ ಸಾವಿರಾರು ವಿದ್ಯಾರ್ಥಿಗಳಿಗೆ ವಿದ್ಯಾದಾನ ನೀಡಿದ್ದಾರೆ. ಮುಖ್ಯವಾಗಿ ಬಸವತತ್ವವನ್ನು ವಿಶ್ವದಾದ್ಯಂತ ಪಸರಿಸಿದ ಮಹಾನ್ ಗರಿಮೆ ಶ್ರೀಗಳಿಗೆ ಇದೆ. ಸಿದ್ಧಲಿಂಗ ಶ್ರೀಗಳು ಕೋಟಿಗೊಬ್ಬರಾಗಿದ್ದು, ಇಂಥ ಮಹಾತ್ಮರ ಒಡನಾಟ ದೊರೆತಿದ್ದು ನಮ್ಮ ಸೌಭಾಗ್ಯ ಎಂದರು.

ಮಾಜಿ ಶಾಸಕರಾದ ರಾಮಕೃಷ್ಣ ದೊಡ್ಡಮನಿ ಮಾತನಾಡಿ, ಕನ್ನಡದ ಜಗದ್ಗುರುಗಳೆಂದೇ ಖ್ಯಾತರಾಗಿದ್ದ ಲಿಂ. ಸಿದ್ಧಲಿಂಗ ▸▸2ನೇ ಪುಟಕ್ಕೆ

# ಬಾಲಾಜಿ ಆಸ್ಪತ್ರೆಯಲ್ಲಿ ಲೋಕಾ ಟ್ರ್ಯಾಪ್





**■ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ**

ಶಾಸಕ ಡಾ. ಚಂದ್ರು ಲಮಾಣಿ ಒಡೆತನದ ಬಾಲಾಜಿ ಆಸ್ಪತ್ರೆಯಲ್ಲೇ ಗುತ್ತಿಗೆದಾರ ವಿಜಯ ಪೂಜಾರ ಅವರು ಶಾಸಕರ ಸಮ್ಮುಖದಲ್ಲೇ ಅವರ ಆಪ್ತ ಸಹಾಯಕ ಮಂಜು ವಾಲ್ಮೀಕಿಗೆ 5 ಲಕ್ಷ ರೂಪಾಯಿ ನಗದನ್ನು ನೀಡುವುದನ್ನು ಮೊದಲೇ ಹೊಂಚು ಹಾಕಿ ಕುಳಿತಿದ್ದ ಧಾರವಾಡ ಲೋಕಾಯುಕ್ತ ಎಸ್.ಪಿ ಸಿದ್ದಲಿಂಗಪ್ಪ ನೇತೃತ್ವದ ತಂಡ ದಿಢೀರ್ ದಾಳಿ ನಡೆಸಿತು.

ಲೋಕಾಯುಕ್ತ ಪೊಲೀಸರನ್ನು ಕಂಡ ತಕ್ಷಣ ಗಾಬರಿಗೊಂಡ ಸಹಾಯಕ ಮಂಜು ವಾಲ್ಮೀಕಿ ತನ್ನ ಬಳಿಯಿದ್ದ ಹಣದ ಕಂತೆಯನ್ನು ಆಸ್ಪತ್ರೆಯ ಹಿಂಭಾಗದ ರಸ್ತೆ ಬದಿ ಎಸೆದು ಸ್ಥಳದಿಂದ ಓಡಿಹೋಗಲು ಯತ್ನಿಸಿದಾಗ ಲೋಕಾಯುಕ್ತ ಸಿಬ್ಬಂದಿ ಆತನನ್ನು ಬೆನ್ನಟ್ಟಿ ಹಿಡಿದು ವಶಕ್ಕೆ ಪಡೆದಿದ್ದಾರೆ. ಎಸೆಯಲ್ಪಟ್ಟ ನಗದನ್ನು ಪೊಲೀಸರು ದಾಳಿ ನಡೆಸಿ ಜಪ್ತಿ ಮಾಡಿದ್ದಾರೆ.

ರಾತ್ರಿ 9 ಗಂಟೆಯಾದರೂ ಲೋಕಾಯುಕ್ತರು ಶಾಸಕರ ವಿಚಾರಣೆ ಮುಂದುವರೆಸಿದ್ದರು. ಆಸ್ಪತ್ರೆಯ ಮುಂದೆ ಕಾರ್ಯಕರ್ತರ ಹೈಡ್ರಾಮಾ ನಡೆದೇ ಇತ್ತು. ಪೊಲೀಸರು ಪರಿಸ್ಥಿತಿ ನಿಯಂತ್ರಿಸುವಲ್ಲಿ ಪೇಚಿಕೆ ಸಿಲುಕಿದ್ದರು.

# ಇನ್ಫೋಸಿಸ್ ಪ್ರತಿಷ್ಠಾನ ಶ್ರೇಷ್ಠ ಕಾರ್ಯ ಮಾಡುತ್ತಿದೆ



**■ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ**

ಡಾ. ಸುಧಾಮೂರ್ತಿ ಅವರ ಇನ್ಫೋಸಿಸ್ ಪ್ರತಿಷ್ಠಾನ ನಾಡಿನ ಪ್ರಾಚೀನ ದೇವಸ್ಥಾನಗಳ ಜೀರ್ಣೋದ್ಧಾರಗಳ ಜೊತೆಗೆ ಇಲ್ಲಿನ ಕಲೆ, ಸಾಹಿತ್ಯ, ಸಂಗೀತ ಸೇರಿದಂತೆ ಸಾಂಸ್ಕೃತಿಕ ವೈಭವವನ್ನು ವಿಜೃಂಭಿಸುವ ಶ್ರೇಷ್ಠ ಕಾರ್ಯವನ್ನು ಮಾಡುತ್ತಿದೆ ಎಂದು ಇನ್ಫೋಸಿಸ್ ಪ್ರತಿಷ್ಠಾನದ ಸಿಎಸ್‌ಆರ್ ವಿಭಾಗದ ವ್ಯವಸ್ಥಾಪಕರಾದ ಪ್ರಶಾಂತ ಹೆಗಡೆ ಹೇಳಿದರು.


ಅವರು ಶುಕ್ರವಾರದಿಂದ ಸೋಮೇಶ್ವರ ದೇವಸ್ಥಾನದಲ್ಲಿ ಪ್ರಾರಂಭಗೊಂಡಿರುವ ಪುಲಿಗೆರೆ ಉತ್ಸವದ ಸಂಜೆ ಕಾರ್ಯಕ್ರಮ ಉದ್ಘಾಟಿಸಿ ಮಾತನಾಡಿ, ಇನ್ಫೋಸಿಸ್ ಶಿಕ್ಷಣ, ಆರೋಗ್ಯ, ಗ್ರಾಮೀಣಾಭಿವೃದ್ಧಿಗಾಗಿ ಸಾಕಷ್ಟು ಅನುದಾನ ವಿನಯೋಗಿಸುತ್ತಿದೆ. ಸೋಮೇಶ್ವರ ದೇವಸ್ಥಾನ ಜೀರ್ಣೋದ್ಧಾರಗೊಳಿಸಿದ ಬಳಿಕ ಕಳೆದ 9 ವರ್ಷಗಳಿಂದ ದೇವಸ್ಥಾನದಲ್ಲಿ 3 ದಿನಗಳ ಕಾಲ ಸಂಗೀತ, ನೃತ್ಯ ಸಂಭ್ರಮದ ಪುಲಿಗೆರೆ ಉತ್ಸವ ಆಯೋಜಿಸುತ್ತಾ ಬಂದಿದ್ದಾರೆ. ಭಾರತೀಯ ವಿದ್ಯಾಭವನದ ಸಹಯೋಗದಲ್ಲಿ ಈ ಕಾರ್ಯ ನಿರಂತರವಾಗಿ ಸಾಗಲು ಈ ಭಾಗದ ಜನರ ಸಹಕಾರ, ಪಾಲ್ಗೊಳ್ಳುವಿಗೆ ಅಗತ್ಯವಾಗಿದೆ ಎಂದರಲ್ಲದೆ, ಸಂಗೀತ, ಕಲೆ, ಸಾಹಿತ್ಯಕ್ಕೆ ಈ ಭಾಗದ ಜನರು ಹೆಚ್ಚು ಪ್ರೋತ್ಸಾಹ ನೀಡುತ್ತಾ ಬರುತ್ತಿದ್ದು, ಅದರಂತೆ ಪುಲಿಗೆರೆ ಉತ್ಸವ ಮುಂದಿನ ▸▸3ನೇ ಪುಟಕ್ಕೆ

# ನಾಟಕಗಳಿಂದ ಸಮಾಜಕ್ಕೆ ಉತ್ತಮ ಸಂದೇಶ

**■ವಿಜಯಸಾಕ್ಷಿ ಸುದ್ದಿ, ಗಜೇಂದ್ರಗಡ**

ನಾಟಕಗಳು ಸಮಾಜಕ್ಕೆ ಒಳ್ಳೆಯ ಸಂದೇಶ ನೀಡುತ್ತವೆ ಮತ್ತು ರಂಗಭೂಮಿ ಮೂಲಕ ಸಮಾಜ ಬೆಳಗಬೇಕಾಗಿದೆ ಎಂದು ಮೃತ್ಯುಂಜಯ ಹಿರೇಮಠ ಹೇಳಿದರು.

ತಾಲೂಕಿನ ಕೊಡಗಾನೂರ ಗ್ರಾಮದ ವೀರಭದ್ರೇಶ್ವರ ಜಾತ್ರೆ ನಿಮಿತ್ತ ವೀರಭದ್ರೇಶ್ವರ ನಾಟ್ಯ ಸಂಘ ಹಮ್ಮಿಕೊಂಡ 'ಸಾಹುಕಾರನ ಸಂಪತ್ತು-ಬಡವನ ತಾಕತ್ತು' ಎಂಬ ನಾಟಕ ಪ್ರದರ್ಶನಕ್ಕೆ ಚಾಲನೆ ನೀಡಿ ಮಾತನಾಡಿದರು.



ವೃತ್ತಿ ರಂಗಭೂಮಿ ನಾಟಕಗಳು ನಶಿಸಿ ಹೋಗುತ್ತಿರುವ ಇಂದಿನ ದಿನಗಳಲ್ಲಿ ನಾಟಕಗಳು ಪುನಃ ಜೀವಂತಿಕೆ ಪಡೆದುಕೊಳ್ಳಬೇಕೆಂಬ ಸುದ್ದೇಶದಿಂದ ಈ ಕಾರ್ಯಕ್ರಮ ಹಮ್ಮಿಕೊಂಡಿದ್ದು ಸಂತಸ ತಂದಿದೆ ಎಂದರು.

ಸಹಾಯಕ ತೋಟಗಾರಿಕೆ ಅಧಿಕಾರಿ ಶರಣಯ್ಯ ಅಂಗಡಿ ಮಾತನಾಡಿ, ಇಂದು ವಿದ್ಯುನ್ಮಾನ ಮಾಧ್ಯಮಗಳ ಹಾವಳಿಯಿಂದ ನೈಜ ಅಭಿನಯದ ನಾಟಕ ಪ್ರದರ್ಶನಗಳ ಸಂಖ್ಯೆ ಕಡಿಮೆಯಾಗುತ್ತಿದೆ. ಆದರೂ ಕೊಡಗಾನೂರನಲ್ಲಿ ಹಲವಾರು ನಾಟಕಗಳು ಪ್ರದರ್ಶನಗೊಳ್ಳುತ್ತಿರುವುದು ಆಶಾದಾಯಕ ಬೆಳವಣಿಗೆ. ನಾಟಕಗಳು ನಮ್ಮ ಕಲೆ, ಸಂಸ್ಕೃತಿಯ ಪ್ರತೀಕವಾಗಿದ್ದು, ರಂಗಭೂಮಿ ಚಟುವಟಿಕೆಗಳಿಗೆ ಸಮಾಜ ಹೆಚ್ಚಿನ ಪ್ರೋತ್ಸಹ ನೀಡಬೇಕು. ನಿರಂತರ ರಂಗಚಟುವಟಿಕೆಗಳಿಂದ ಉತ್ತಮ ಸಮಾಜದ ನಿರ್ಮಾಣ ಸಾಧ್ಯ ಎಂದರು. ನಿವೃತ್ತ ಪಿಡಿಓ ವಾಯ್. ಎಚ್. ಕಳ್ಳಿಗುಡಿ ಮಾತನಾಡಿ, ಸಮಾಜದಲ್ಲಿ ಉತ್ತಮ ವಾತಾವರಣ ನಿರ್ಮಿಸಲು ಸಂಗೀತ, ನಾಟಕ, ಮತ್ತು ಸಾಂಸ್ಕೃತಿಕ ಹಬ್ಬಗಳು ಪೂರಕವಾಗುತ್ತವೆ. ಯುವ ಪೀಳಿಗೆಯಿಂದ ನಾವು ಏನನ್ನಾದರೂ ನಿರೀಕ್ಷಿಸಬೇಕೆಂದರೆ ಮೊದಲು ಅವರನ್ನು ಸುಸಂಸ್ಕೃತರನ್ನಾಗಿ ರೂಪಿಸಬೇಕು ಎಂದು ತಿಳಿಸಿದರು.

ಈ ಸಂದರ್ಭದಲ್ಲಿ ಗ್ರಾಮ ಪಂಚಾಯಿತಿ ಮಾಜಿ ಸದಸ್ಯರಾದ ಅಕ್ಕಮಹಾದೇವಿ ವಾಲ್ಮೀಕಿ, ನಿರ್ಮಲಾ ಸೊಲಬಗೌಡ್ರ, ಭರಮಪ್ಪ ಹುಣಸಿಗಿಡದ, ಸಣ್ಣಪಾರಪ್ಪ ತೋಟದ, ವೀರಯ್ಯ ಕಪ್ಲಿಮಠ, ವೀರಯ್ಯ ಬಾಳಿಕಾಯಿಮಠ, ಶಿವಾನಂದ ಹುಯಿಲಗೋಳ, ಸಂಗಪ್ಪ ನಡಕಟ್ಟಿನ, ರಾಮಪ್ಪ ಹೂಗಾರ, ಲಲಿತಾ ಪೂಜಾರ, ಮಲ್ಲಯ್ಯ ಹಿರೇಮಠ, ಈರಪ್ಪ ನಡಕಟ್ಟಿನ, ಪರಸಪ್ಪ ವಾಲ್ಮೀಕಿ, ಮಾಂತಯ್ಯ ಕಪ್ಪಿಮಠ, ಮಲ್ಲಯ್ಯ ಬಣ್ಣದಮಠ, ಬಾಲಚಂದ್ರ ವಾಲ್ಮೀಕಿ, ಪ್ರಭುಲಿಂಗಯ್ಯ ಹಿರೇಮಠ, ಸೈದುಸಾಬ ನದಾಫ್, ಚಂದ್ರು ಹೂಗಾರ ಮುಂತಾದವರು ಪಾಲ್ಗೊಂಡಿದ್ದರು.

# ಕಾಂಗ್ರೆಸ್ ಸರ್ಕಾರ ಬಡವರ ಲೂಟಿ ಮಾಡುತ್ತಿದೆ

■ವಿಜಯಸಾಕ್ಷಿ ಸುದ್ದಿ, ಗದಗ

ಕಾಂಗ್ರೆಸ್ ಸರ್ಕಾರ ಜಿಲ್ಲಾ ಆಸ್ಪತ್ರೆಗಳಲ್ಲಿ ನಿಯಮಗಳನ್ನು ಕಠಿಣಗೊಳಿಸಿ ಬಡವರಿಗೆ ಸೂಕ್ತ ಸಮಯದಲ್ಲಿ ಸೇವೆ ದೊರೆಯದಂತೆ ಮಾಡಿದ್ದು, ಇದು ಘೋರ ಅನ್ಯಾಯ ಎಂದು ಬಿಜೆಪಿ ಗದಗ ಜಿಲ್ಲಾಧ್ಯಕ್ಷ ತೋಟಪ್ಪ(ರಾಜು) ಕುರುಡಗಿ ಆರೋಪಿಸಿದ್ದಾರೆ.



ಈ ಕುರಿತು ಪತ್ರಿಕಾ ಹೇಳಿಕೆ ನೀಡಿರುವ ಅವರು, ಖಾಸಗಿ ಆಸ್ಪತ್ರೆಗಳಲ್ಲಿ ಸಿ.ಟಿ. ಸ್ಕ್ಯಾನಿಂಗ್ ಮತ್ತು ಎಂಆರ್ಐ ಸೇವೆ ಒದಗಿಸಲಾಗುತ್ತಿದೆ. ಆದರೆ ಜಿಲ್ಲಾ ಆಸ್ಪತ್ರೆಗಳಲ್ಲಿ ಬಡವರಿಗೆ ಸರಿಯಾಗಿ ಸೌಲಭ್ಯ ಸಿಗುತ್ತಿಲ್ಲ. ಖಾಸಗಿ ಲ್ಯಾಬ್‌ಗಳಲ್ಲಿ ದುಬಾರಿ ಶುಲ್ಕ ಪಾವತಿಸಲಾಗದೆ ರೋಗಿಗಳು ಪರದಾಡುತ್ತಿದ್ದಾರೆ. ಬಡವರು ಜಿಲ್ಲಾಸ್ಪತ್ರೆಗಳಲ್ಲಿ ಸೌಲಭ್ಯವಿಲ್ಲದ ಕಾರಣ ಬೇರೆ ನಗರಗಳಿಗೆ ಅಲೆಯುವಂತಾಗಿದೆ. ಜಿಲ್ಲಾಸ್ಪತ್ರೆಗಳಲ್ಲಿ ಪ್ರತಿನಿತ್ಯ 35ರಿಂದ 80 ಎಂಆರ್ಐ ಸ್ಕ್ಯಾನಿಂಗ್ ನಡೆಯುತ್ತಿದ್ದವು. ಈಗ 3ರಿಂದ 13 ಸ್ಕ್ಯಾನಿಂಗ್ ಮಾತ್ರ ಸಾಧ್ಯವಾಗುತ್ತಿದೆ.

ರಾಷ್ಟ್ರೀಯ ಆರೋಗ್ಯ ಮಿಷನ್ ಅಡಿ ಜಿಲ್ಲಾಸ್ಪತ್ರೆಗಳಲ್ಲಿ ಉಚಿತ ಡಯಾಗ್ನೋಸ್ಟಿಕ್ ಸೇವೆ ಒದಗಿಸಲು ಪಿಪಿಪಿ ಮಾದರಿ ಜಾರಿಗೊಳಿಸಿ ಗುತ್ತಿಗೆ ನೀಡಲಾಗಿದೆ. ಹಿಂದೆ ತಜ್ಞ ವೈದ್ಯರು ಸೂಚಿಸಿದರೆ ಸ್ಕ್ಯಾನಿಂಗ್ ನಡೆಯುತ್ತಿತ್ತು. ಆದರೆ ಕಳೆದ ಡಿಸೆಂಬರ್‌ನಲ್ಲಿ ಎಸ್‌ಎಎಸ್‌ಟಿ ಅನುಮತಿ ಪಡೆಯುವುದನ್ನು ಕಡ್ಡಾಯಗೊಳಿಸಿದ ಬಳಿಕ ಸಮಸ್ಯೆ ಸೃಷ್ಟಿಯಾಗಿದೆ. ವಿವರಗಳನ್ನು ನಿಗದಿತ ತಂತ್ರಾಂಶದಲ್ಲಿ ಟ್ರಸ್ಟ್‌ಗೆ ರವಾನಿಸಿ ಅನುಮತಿ ಪಡೆಯಲು ರೋಗಿಗಳ ರೇಷನ್ ಮತ್ತು ಆಧಾರ್ ಕಾರ್ಡ್ ಕಡ್ಡಾಯಗೊಳಿಸಲಾಗಿದೆ. ಅಪಘಾತದ ಸಂದರ್ಭದಲ್ಲಿ ಮತ್ತು ಆಧಾರ್ ಕಾರ್ಡ್ ಇಲ್ಲದೆ ಬೇರೆ ಜಿಲ್ಲೆ, ಹೊರ ರಾಜ್ಯಗಳಿಂದ ಬಂದವರು ನರಳಾಡುವ ಸ್ಥಿತಿ ಎದುರಾಗಿದೆ.

ಕಾಂಗ್ರೆಸ್ ಸರ್ಕಾರವನ್ನು ಅಧಿಕಾರಕ್ಕೆ ತಂದಿರುವದು ಬಡಜನರ ಸೇವೆ ಮಾಡಲು. ಆದರೆ ಸೇವೆ ಮಾಡುವದನ್ನು ಬಿಟ್ಟು ಲೂಟಿ ಹೊಡೆಯುತ್ತಾ ಅಡ್ಡಾಡುತ್ತಿರುವ ಕಾಂಗ್ರೆಸ್ ಪಕ್ಷದ ನಾಯಕರಿಗೆ ಮುಂದೆ ಬರುವ ಚುನಾವಣೆಯಲ್ಲಿ ಮತದಾರರು ತಕ್ಕಪಾಠ ಕಲಿಸಲಿದ್ದಾರೆ ಎಂದು ಬಿಜೆಪಿ ಗದಗ ಜಿಲ್ಲಾಧ್ಯಕ್ಷರಾದ ತೋಟಪ್ಪ(ರಾಜು) ಕುರುಡಗಿ ಚಾಟಿ ಬೀಸಿದ್ದಾರೆ.

## ರವಿ ಹಂಜ್‌ರಿಗೆ ಶ್ರೀ ಜಗದ್ಗುರು ರಂಭಾಪುರಿ ಮಹಾಪೀಠದ 'ಶ್ರೀ ಜಗದ್ಗುರು ರೇಣುಕಾಚಾರ್ಯ ಪ್ರಶಸ್ತಿ'

# ಗಟ್ಟಿ ಗುಂಡಿಗೆಯ ಅನುಭಾವಿ ರವಿ ಹಂಜ್

ನಾಡಿನ ಜನತೆಗೆ ಚಿರಪರಿಚಿತರಾಗಿರುವ ದಾವಣಗೆರೆಯ ರವಿ ಹಂಜ್ ಅವರು ಪ್ರಾಜ್ಞ ಮನಸ್ಸಿನ ಚಿಂತಕರು ಮತ್ತು ವಿವೇಚನಾಶೀಲ ಬರಹಗಾರರಾಗಿದ್ದಾರೆ. ಸಧ್ಯ ಅಮೇರಿಕಾದ ಶಿಕಾಗೋ ನಿವಾಸಿಗಳಾದ ರವಿ ಹಂಜ್ ಅವರು ದಾವಣಗೆರೆಯಲ್ಲಿ ಪ್ರಾಥಮಿಕದಿಂದ ಪದವಿಯವರೆಗೆ ಶಿಕ್ಷಣ ಪೂರೈಸಿದರು.

ಹಾಸನದ ಮಲೆನಾಡು ತಾಂತ್ರಿಕ ಮಹಾವಿದ್ಯಾಲಯದಲ್ಲಿ ಎಂ.ಸಿ.ಎ ಪದವಿ, ಅಮೆರಿಕೆಯ ಹಾರ್ವರ್ಡ್ ವಿಶ್ವವಿದ್ಯಾಲಯದಲ್ಲಿ ಡಿಪ್ಲೋಮಾ ಇನ್ ಮ್ಯಾನೇಜಮೆಂಟ್, ಶಿಕಾಗೋದ ಡಿ'ಪೌಲ್ ವಿಶ್ವವಿದ್ಯಾಲಯದಲ್ಲಿ ವೆಬ್ ಕಾಮರ್ಸ್ ವಿಷಯದಲ್ಲಿ ಡಿಪ್ಲೋಮಾ ಕೋರ್ಸ್ ಅಧ್ಯಯನ ಗೈದು ಅಮೇರಿಕಾ ಮೂಲದ ಬೆಂಗಳೂರಿನ ಡಿಜಿಟಲ್ ಎಕ್ವಿಪ್ಮೆಂಟ್ ಕಂಪೆನಿಯಲ್ಲಿ ಅಭಿಯಂತರರಾಗಿ ವೃತ್ತಿ ಆರಂಭಿಸಿದರು.

ಶಿಕಾಗೋನಲ್ಲಿ ಹೆಚ್ಚಿನ ಹುದ್ದೆಯೊಂದಿಗೆ ವೃತ್ತಿ ವರ್ಗಾವಣೆಗೊಂಡು ಪ್ರತಿಷ್ಠಿತ ಕಂಪನಿಗಳಲ್ಲಿ ದಕ್ಷತೆಯ ಕಾರ್ಯ ನಿರ್ವಹಿಸಿ, ಹಲವಾರು ಅತ್ಯತ್ತುಮ ಪ್ರಶಸ್ತಿ-ಪ್ರಶಂಸೆಗಳನ್ನು ಪಡೆದಿದ್ದಾರೆ. ಶ್ರೀಯುತರು ವಿದೇಶದಲ್ಲಿ ನೆಲೆಸಿದ್ದರೂ ಸಹ ಮಾತೃಭೂಮಿಯ ಮೇಲೆ ಅಪಾರ ಭಕ್ತಿ, ಗೌರವದ ಭಾವನೆಗಳನ್ನು ಇರಿಸಿಕೊಂಡವರು. ತಾವು ಎಲ್ಲೇ ಇದ್ದರೂ ದೇಶಾಭಿಮಾನ, ಭಾಷಾಭಿಮಾನ ಮರೆದವರು. ತಮ್ಮ ವೃತ್ತಿ ಜೀವನದಲ್ಲಿ ಅನೇಕ ಕಥೆ, ಕಾದಂಬರಿಗಳ ಓದಿನ ಜೊತೆಗೆ ಪ್ರಾಚೀನ ಗ್ರಂಥಗಳ ಅಧ್ಯಯನಶೀಲರಾಗಿ ಅಲ್ಲಲ್ಲಿ ನಡೆಯುತ್ತಿದ್ದ ಸಾಮಾಜಿಕ, ಸಾಂಸ್ಕೃತಿಕ ಮತ್ತು ಸಾಹಿತ್ಯಿಕ ಸಭೆ-ಸಮಾರಂಭಗಳಲ್ಲಿ ಪಾಲ್ಗೊಂಡು ತಮ್ಮ ಅನುಭವವನ್ನು ಹಂಚಿಕೊಳ್ಳುತ್ತಿದ್ದ ರವಿಯವರು ಕನ್ನಡದ ಕಂಪನ್ನು ಹೊರದೇಶದಲ್ಲೂ ಸೂಸುವಲ್ಲಿ ಯಶರಾದವರು.

ಬೆಂಗಳೂರು ಮೂಲದ ಗಣಕಯಂತ್ರ ತಜ್ಞೆ ಸುನೀತಾ ಅವರನ್ನು ವರಿಸಿದ ರವಿ ಹಂಜ್ ಅನೇಕ ಉತ್ತಮೋತ್ತಮ ಕಾರ್ಯಗಳನ್ನು ಸಮಾಜಕ್ಕೆ ಎಲೆಮರೆಯ ಕಾಯಿಯಂತಿದ್ದು ಕೊಡುಗೆ ಕೊಟ್ಟವರು. ಸಧ್ಯ ಆಡಳಿತ ತಜ್ಞರಾಗಿ ಜೀವನ ನಡೆಸುತ್ತಿದ್ದಾರೆ. ಬರವಣಿಗೆಯನ್ನು ನವ್ಯ ಮಾದರಿಯಲ್ಲಿ ರೂಪಿಸಿಕೊಂಡು ತಮ್ಮ ಅನನ್ಯಯುತ ವೈಚಾರಿಕತೆ, ವಿಡಂಬನೆ ಮತ್ತು ಸ್ಥಿತಪ್ರಜ್ಞೆಯ ಮುಖಾಂತರ ಅನೇಕ ಓದುಗರ ಮನ ಗೆದ್ದವರು. ನಿಷ್ಠುರ ನಡೆ, ಸಮಯಪ್ರಜ್ಞೆ, ನಿಸ್ವಾರ್ಥಯುತ ಲೇಪವನ್ನು ಹೊತ್ತು ಅನೇಕ ಪತ್ರಿಕೆಗಳಲ್ಲಿ ಅಂಕಣ ಬರಹಗಳನ್ನು ಬರೆಯುವುದರ ಮೂಲಕ ಐತಿಹಾಸಿಕ ಮೈಲಿಗಲ್ಲನ್ನು ನೆಟ್ಟವರು.



ಸಂಶೋಧನಾತ್ಮಕ ಕೃತಿಗಳನ್ನು, ಆತ್ಮಕಥನವನ್ನು, ಅನುವಾದಿತ ಕೃತಿಗಳನ್ನು ರಚಿಸಿರುವ ಇವರು ತತ್ತ್ವಾದರ್ಶಗಳ ಹೆಜ್ಜೆಯಲ್ಲಿ ನಿಜದ ನಿಲುವನ್ನು ಬಿಂಬಿಸಿದವರು. ಇವರ ಹ್ಯೂಯನ್‌ತ್ಸಾಂಗನ ಮಹಾಪಯಣ ಎಂಬ ಕೃತಿಗೆ 2018ರಲ್ಲಿ ಕರ್ನಾಟಕ ಸಾಹಿತ್ಯ ಅಕಾಡೆಮಿಯ ಪ್ರಶಸ್ತಿಯ ಗರಿ ಸಂದಿದೆ. ವೀರಶೈವ ಧರ್ಮದ ಮೂಲ ಸಿದ್ಧಾಂತ ಮತ್ತು ಅದರ ಉದಾತ್ತ ಚಿಂತನೆಗಳನ್ನು ಜನಮಾನಸಕ್ಕೆ ತೀಕ್ಷ್ಣತೆ ಮತ್ತು ತೀವ್ರತೆಗೆ ತಕ್ಕಂತೆ ನಿರೂಪಣೆ ಮಾಡಿದ್ದನ್ನು ಮರೆಯಲಾಗದು.

ಚುಚ್ಚು ಮಾತುಗಳಿಗೆ, ತುಚ್ಚ ಮನಸ್ಸುಗಳಿಗೆ ತಮ್ಮ ಉಚ್ಚ ಅಕ್ಷರದ ಮೂಲಕವೇ ಸ್ವಚ್ಛತೆ ಮತ್ತು ಸ್ಪಷ್ಟತೆ ನೀಡುತ್ತ ಧಾರ್ಮಿಕ ರಂಗದಲ್ಲಿ ಹೊಸ ಸಂಚಲನ ಮೂಡಿಸಿರುವುದು ಇವರೊಳಗಿನ ಸ್ವಾಭಿಮಾನಕ್ಕೆ ಸಾಕ್ಷಿಯಾಗಿದೆ. ಆಳವಾದ ಅಧ್ಯಯನ, ಪರಿಷ್ಕರಣೆ, ಸಂಶೋಧನೆ ಮತ್ತು ಪ್ರಸ್ತುತಪಡಿಸುವ ಪರಿ ವಿಭಿನ್ನವಾದರೂ ಸಹ ಮೂಲ ಬೇರನ್ನು ಮತ್ತೆ ಮತ್ತೆ ಗಟ್ಟಿಗೊಳಿಸುವುದೇ ಆಗಿರುತ್ತದೆ. ಸಮಷ್ಟಿ ಆಶಯದಲ್ಲಿ ಸಮಾಜಕ್ಕೆ ಸತ್ಯವನ್ನು ಬಿಚ್ಚಿಡುವ ಗಟ್ಟಿ ಗುಂಡಿಗೆಯ ಅನುಭಾವಿಗಳಾದ ರವಿ ಹಂಜ್ ಅವರು ಭವಿಷ್ಯತ್ತಿನಲ್ಲಿ ವೀರಶೈವ ಧರ್ಮದ ಚಿಂತನಾತ್ಮಕ ವಿಚಾರಧಾರೆಗಳನ್ನು ಮತ್ತು ತಾತ್ವಿಕ ವಿಷಯಗಳನ್ನು ತಮ್ಮ ಅಮೂಲ್ಯ ಬರವಣಿಗೆಯ ಮುಖಾಂತರ ನಾಡಿಗರಿಗೆ ಜಾಗೃತಿ ಮೂಡಿಸುವ ಸಂಕಲ್ಪ ಹೊಂದಿದವರಾಗಿದ್ದಾರೆ. ಶ್ರೀಯುತರ ಅತ್ಯುತ್ತಮ ಕ್ರಿಯಾಶೀಲತೆ, ಆಧ್ಯಾತ್ಮ ಕ್ರಮಬದ್ಧತೆ, ವಿವೇಚನಾಯುಕ್ತ ನಡೆಗಳನ್ನು ಮನಗಂಡ ಅನೇಕ ಮಠ-ಮಾನ್ಯಗಳು, ಸಂಘ-ಸಂಸ್ಥೆಗಳು ಪ್ರಶಸ್ತಿ, ಪದಕ, ಪುರಸ್ಕಾರಗಳನ್ನು ನೀಡಿ ಗೌರವಿಸಿವೆ.

ವಿಶ್ವಧರ್ಮದ ವಿಭು ಶ್ರೀ ಜಗದ್ಗುರು ರೇಣುಕ ಭಗವತ್ಪಾದರು ಗೈದ ಸತ್ಕ್ರಾಂತಿಗಳನ್ನು ಆದರ್ಶವಾಗಿಟ್ಟುಕೊಂಡ ಶ್ರೀಯುತ ರವಿ ಹಂಜ್ ಅವರಿಗೆ ಬಾಳೆಹೊನ್ನೂರು ಶ್ರೀ ಜಗದ್ಗುರು ರಂಭಾಪುರಿ ವೀರಸಿಂಹಾಸನ ಮಹಾಸಂಸ್ಥಾನ ಪೀಠದಲ್ಲಿ 01-03-2026 ಭಾನುವಾರದಂದು ಶ್ರೀಮದ್ ರಂಭಾಪುರಿ ವೀರಸಿಂಹಾಸನಾಧೀಶ್ವರ ಶ್ರೀ ಶ್ರೀ ಶ್ರೀ 1008 ಜಗದ್ಗುರು ಪ್ರಸನ್ನ ರೇಣುಕ ಡಾ. ವೀರಸೋಮೇಶ್ವರ ರಾಜದೇಶಿಕೇಂದ್ರ ಶಿವಾಚಾರ್ಯ ಭಗವತ್ಪಾದರ ದಿವ್ಯ ಸಾನ್ನಿಧ್ಯದಲ್ಲಿ, ಪಾಲ್ಗೊಳ್ಳುವ ನಾಡಿನ ವಿವಿಧ ಶ್ರೀಗಳವರ ಹಾಗೂ ಗಣ್ಯಮಾನ್ಯರ ಸಮ್ಮುಖದಲ್ಲಿ ಜರುಗುವ ಶ್ರೀ ಜಗದ್ಗುರು ರೇಣುಕಾಚಾರ್ಯ ಜಯಂತಿ ಯುಗಮಾನೋತ್ಸವ ಹಾಗೂ ಕ್ಷೇತ್ರನಾಥ ಶ್ರೀ ವೀರಭದ್ರಸ್ವಾಮಿ ಮಹಾರಥೋತ್ಸವ ಶಿವಾದ್ವೈತ ಸಮಾವೇಶದ ಸುಸಂದರ್ಭದಲ್ಲಿ 1 ಲಕ್ಷ ನಗದು, ಕಂಚಿನ ಫಲಕ ಹಾಗೂ ಸ್ಮರಣಿಕೆಯನ್ನು ಒಳಗೊಂಡಿರುವ 2026 ನೇ ಸಾಲಿನ ಶ್ರೀಪೀಠದ ಅತ್ಯುನ್ನತ "ಶ್ರೀ ಜಗದ್ಗುರು ರೇಣುಕಾಚಾರ್ಯ ಪ್ರಶಸ್ತಿ"ಯನ್ನು ಅನುಗ್ರಹಿಸಲಾಗುವುದು.

– ಡಾ. ಗುರುಪಾದಯ್ಯ
ವೀ.ಸಾಲಿಮಠ, ಸವಣೂರು.

# ಅರ್ಜಿ ಸಲ್ಲಿಸುವ ಅವಧಿ ವಿಸ್ತರಣೆ

■ವಿಜಯಸಾಕ್ಷಿ ಸುದ್ದಿ, ಗದಗ

2025-26ನೇ ಸಾಲಿನಲ್ಲಿ ಮೆಟ್ರಿಕ್ ನಂತರದ ಕೋರ್ಸ್‌ಗಳಲ್ಲಿ ಅಧ್ಯಯನ ಮಾಡುತ್ತಿರುವ ಹಿಂದುಳಿದ ವರ್ಗಗಳ ವಿದ್ಯಾರ್ಥಿಗಳು ಹಾಗೂ ಪ್ರವರ್ಗ-1ರ ಅಲೆಮಾರಿ/ಅರೆಅಲೆಮಾರಿ ಜನಾಂಗದ ವಿದ್ಯಾರ್ಥಿಗಳಿಗೆ ನೀಡಲಾಗುತ್ತಿರುವ ಶುಲ್ಕ ಮರುಪಾವತಿ ಯೋಜನೆಗಾಗಿ ಆನ್‌ಲೈನ್ ಮೂಲಕ ಅರ್ಜಿ ಸಲ್ಲಿಸುವ ಅಂತಿಮ ದಿನಾಂಕವನ್ನು 05.03.2026ರವರೆಗೆ ವಿಸ್ತರಿಸಲಾಗಿದೆ.

ಯೋಜನೆಯ ಸೌಲಭ್ಯ ಪಡೆಯಲು ಅರ್ಹ ವಿದ್ಯಾರ್ಥಿಗಳು ನಿಗದಿತ ಅವಧಿಯೊಳಗೆ ಅರ್ಜಿ ಸಲ್ಲಿಸುವಂತೆ ಜಿಲ್ಲಾ ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ ಪ್ರಕಟಣೆಯಲ್ಲಿ ತಿಳಿಸಿದೆ. ಹೆಚ್ಚಿನ ಮಾಹಿತಿಗಾಗಿ ಗದಗ ಜಿಲ್ಲಾ ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ ಕಚೇರಿ ದೂರವಾಣಿ ಸಂಖ್ಯೆ 08372-237414 ಅನ್ನು ಸಂಪರ್ಕಿಸಬಹುದು.

# ಗಜೇಂದ್ರಗಡ ಐಟಿಐಗೆ ಕಚ್ಚಾ ಸಾಮಗ್ರಿ, ಲ್ಯಾಪಟಾಪ್ ಪೂರೈಕೆಗೆ ದರಪಟ್ಟಿ ಆಹ್ವಾನ

■ವಿಜಯಸಾಕ್ಷಿ ಸುದ್ದಿ, ಗದಗ

ಗಜೇಂದ್ರಗಡ ತಾಲೂಕು ಸೂಡಿಯಲ್ಲಿ ಇರುವ Government Industrial Training Institute Sudi (ಸರಕಾರಿ ಕೈಗಾರಿಕಾ ತರಬೇತಿ ಸಂಸ್ಥೆ) ಯಲ್ಲಿ ನಡೆಯುವ ವಿವಿಧ ತರಬೇತಿಗಳಿಗೆ ಅಗತ್ಯವಿರುವ ಕಚ್ಚಾ ಸಾಮಗ್ರಿಗಳು ಹಾಗೂ ಲ್ಯಾಪ್‌ಟಾಪ್‌ಗಳನ್ನು ಪೂರೈಸಲು ದರಪಟ್ಟಿ (Quotation) ಆಹ್ವಾನಿಸಲಾಗಿದೆ.

ಆಸಕ್ತ ಪೂರೈಕೆದಾರರು ತಮ್ಮ ದರಪಟ್ಟಿಗಳನ್ನು ನಿಗದಿತ ಅವಧಿಯೊಳಗೆ ಸಲ್ಲಿಸಬಹುದಾಗಿದೆ.

ಹೆಚ್ಚಿನ ಮಾಹಿತಿಗಾಗಿ ಕೈಗಾರಿಕಾ ತರಬೇತಿ ಮತ್ತು ಉದ್ಯೋಗ ಇಲಾಖೆ, ಸೂಡಿ ಸಂಪರ್ಕಿಸಬಹುದು.

ಸಂಪರ್ಕ ಸಂಖ್ಯೆ: 08381-284243 ಈ ಕುರಿತು ಸಂಸ್ಥೆಯ ಪ್ರಾಚಾರ್ಯರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಪ್ರಶಸ್ತಿಗಳಿಗೆ ಅರ್ಜಿ ಆಹ್ವಾನ

■ವಿಜಯಸಾಕ್ಷಿ ಸುದ್ದಿ, ಗದಗ

ರಾಜ್ಯ ಸರ್ಕಾರದ ವತಿಯಿಂದ ಪ್ರತಿ ವರ್ಷ ಎಪ್ರಿಲ್ 05ರಂದು ಡಾ. ಬಾಬು ಜಗಜೀವನರಾಮ್ ಹಾಗೂ ಎಪ್ರಿಲ್ 14ರಂದು ಡಾ. ಬಿ.ಆರ್. ಅಂಬೇಡ್ಕರ್ ಅವರ ಜನ್ಮ ದಿನಾಚರಣೆಗಳನ್ನು ರಾಜ್ಯ ಮಟ್ಟದಲ್ಲಿ ವಿಜೃಂಭಣೆಯಿಂದ ಆಚರಿಸಲಾಗುತ್ತದೆ.

ಈ ಅಂಗವಾಗಿ ಪರಿಶಿಷ್ಟ ಜಾತಿ/ಪರಿಶಿಷ್ಟ ಪಂಗಡದ ಜನಾಂಗದವರ ಶ್ರೇಯಸ್ಸಿಗಾಗಿ ಶ್ರಮಿಸಿ, ಗಣನೀಯ ಸೇವೆ ಸಲ್ಲಿಸಿರುವ ಅರ್ಹ ವ್ಯಕ್ತಿಗಳನ್ನು ಗುರುತಿಸಿ 2026-27ನೇ ಸಾಲಿನ ಡಾ. ಬಾಬು ಜಗಜೀವನರಾಮ್ ಮತ್ತು ಡಾ. ಬಿ.ಆರ್. ಅಂಬೇಡ್ಕರ್ ಪ್ರಶಸ್ತಿಗಳನ್ನು ನೀಡಿ ಗೌರವಿಸಲು ಉದ್ದೇಶಿಸಲಾಗಿದೆ.

ಪರಿಶಿಷ್ಟ ಜಾತಿ/ಪರಿಶಿಷ್ಟ ಪಂಗಡ ಸಮುದಾಯದವರು ಹಾಗೂ ಸಾರ್ವಜನಿಕರಿಂದ ಅರ್ಜಿಗಳನ್ನು ಆಹ್ವಾನಿಸಲಾಗಿದೆ.

ಅರ್ಜಿ ಸಲ್ಲಿಕೆ ವಿವರಗಳು: ನಿಗದಿತ ನಮೂನೆಯಲ್ಲಿ ಅರ್ಜಿ ಭರ್ತಿ ಮಾಡಬೇಕು. ಭರ್ತಿ ಮಾಡಿದ ಅರ್ಜಿಗಳನ್ನು ಉಪನಿರ್ದೇಶಕರ ಕಚೇರಿ, ಸಮಾಜ ಕಲ್ಯಾಣ ಇಲಾಖೆ, ಗದಗ ಇಲ್ಲಿ ಸಲ್ಲಿಸಬೇಕು.

ಅರ್ಜಿ ಸಲ್ಲಿಸಲು ಕೊನೆಯ ದಿನಾಂಕ: 04-03-2026 ಅರ್ಜಿಯ ನಮೂನೆ ಹಾಗೂ ಹೆಚ್ಚಿನ ಮಾಹಿತಿಗಾಗಿ ಉಪನಿರ್ದೇಶಕರ ಕಚೇರಿ, ಸಮಾಜ ಕಲ್ಯಾಣ ಇಲಾಖೆ, ಗದಗ ಕಚೇರಿಯನ್ನು ಸಂಪರ್ಕಿಸಲು ಪ್ರಕಟಣೆ ತಿಳಿಸಿದೆ.

# ಜನತಾ ದರ್ಶನ ಬೋಗಸ್ ದರ್ಶನವಾಗದಿರಲಿ

■ವಿಜಯಸಾಕ್ಷಿ ಸುದ್ದಿ, ಗದಗ

ಗದಗ ಜಿಲ್ಲಾ ಉಸ್ತುವಾರಿ ಸಚಿವ ಹೆಚ್.ಕೆ. ಪಾಟೀಲರ ಅಧ್ಯಕ್ಷತೆಯಲ್ಲಿ ಫೆ. 27ರಂದು ಜಿಲ್ಲಾ ಮಟ್ಟದ ಜನತಾ ದರ್ಶನ ನಡೆಯಲಿದೆ.

ಆದರೆ ಇದು ಕಾಟಾಚಾರದ ಜನತಾ ದರ್ಶನ ಆಗದೆ ಸಾರ್ವಜನಿಕರು ಅನುಭವಿಸುತ್ತಿರುವ ಸಮಸ್ಯೆಗಳಿಗೆ ಸೂಕ್ತ ಪರಿಹಾರ ಕಂಡುಕೊಳ್ಳುವ ಸಭೆಯಾಗಲಿ ಎಂದು ಡಾ. ಬಿ.ಆರ್. ಅಂಬೇಡ್ಕರ್ ದಲಿತ ಸಂಘರ್ಷ ಸಮಿತಿಯ ಜಿಲ್ಲಾಧ್ಯಕ್ಷ ಶಿವಾನಂದ ತಮ್ಮಣ್ಣವರ ಆಶಿಸಿದ್ದಾರೆ.



ಈ ಕುರಿತು ಪತ್ರಿಕಾ ಹೇಳಿಕೆ ನೀಡಿರುವ ಅವರು, 2024ರಂದು ಜಿಲ್ಲಾ ಉಸ್ತುವಾರಿ ಸಚಿವರು ನಡೆಸಿದ ಜನತಾ ದರ್ಶನ ಕಾರ್ಯಕ್ರಮದಲ್ಲಿ ಕೆ.ಎಚ್. ಪಾಟೀಲ್ ವೈದ್ಯಕೀಯ ವಿಜ್ಞಾನಗಳ ಸಂಸ್ಥೆಯಲ್ಲಿ ನಡೆಯುತ್ತಿರುವ ಅಕ್ರಮ ನೇಮಕಾತಿಗೆ ಸಂಬಂಧಿಸಿದಂತೆ ಜನತಾ ದರ್ಶನ ಕಾರ್ಯಕ್ರಮದಲ್ಲಿ ನೀಡಿದ ಮನವಿಗೆ ಯಾವುದೇ ಕ್ರಮ ಕೈಗೊಂಡಿಲ್ಲ. ಹೀಗಾಗಿ ಈ ಬಾರಿ ನಡೆಯುವ ಜಿಲ್ಲಾ ಮಟ್ಟದ ಜನತಾ ದರ್ಶನ ಕಾರ್ಯಕ್ರಮದಲ್ಲಿ ಜಿಲ್ಲೆಯ ಸಚಿವರು ಯಾವ ರೀತಿ ಕಾನೂನಿಗೆ ಗೌರವ ನೀಡುತ್ತಾರೆಂದು ಕಾದು ನೋಡಬೇಕಿದೆ ಎಂದು ಹೇಳಿಕೆ ನಿಡಿದ್ದಾರೆ.

# ಧ.ಗ್ರಾ ಸಂಘದ ಕಾರ್ಯ ಶ್ಲಾಘನೀಯ



■ವಿಜಯಸಾಕ್ಷಿ ಸುದ್ದಿ, ಮುಳಗುಂದ

ಮಹಿಳೆಯರು ಆರ್ಥಿಕವಾಗಿ ಅಭಿವೃದ್ಧಿ ಹೊಂದಲು ಧರ್ಮಸ್ಥಳ ಗ್ರಾಮಾಭಿವೃದ್ಧಿ ಸಂಘದ ಕಾರ್ಯ ಶ್ಲಾಘನೀಯ ಎಂದು ಎಸ್.ಸಿ. ಬಡ್ನಿ ಹೇಳಿದರು.

ಅವರು ಪಟ್ಟಣದ ಬಾಲಲೀಲಾ ಮಾಹಾಂತ ಶಿವಯೋಗಿ ಗವಿಮಠದ ಸಭಾಭವನದಲ್ಲಿ ಧರ್ಮಸ್ಥಳ ಗ್ರಾಮಾಭಿವೃದ್ಧಿ ಯೋಜನೆಯ ಜ್ಞಾನವಿಕಾಸ ವಾರ್ಷಿಕೋತ್ಸವ ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿ ಮಾತನಾಡಿದರು.

ಮಹಿಳೆಯ ಅಭಿವೃದ್ಧಿ ಹೊಂದಿದಾಗ ಕುಟುಂಬ ಆರ್ಥಿಕವಾಗಿ ಅಭಿವೃದ್ಧಿ ಹೊಂದಲು ಸಾಧ್ಯ ಎಂಬ ಉದ್ದೇಶದಿಂದ ಹೇಮಾವತಿ ಅಮ್ಮನವರು ಸಾಕಷ್ಟು ಯೋಜನೆಗಳನ್ನು ತರುವ ಮೂಲಕ ಮಹಿಳೆಯರನ್ನು ಆರ್ಥಿಕ ಅಭಿವೃದ್ಧಿ ಪಥದತ್ತ ಕೊಂಡೊಯ್ಯುತ್ತಿದ್ದು, ಅಮ್ಮನವರ ಕಾರ್ಯ ನಿಜಕ್ಕೂ ಶ್ಲಾಘನೀಯ ಎಂದರು.

ಶಿರಹಟ್ಟಿ ತಾಲೂಕಾ ಯೋಜನಾಧಿಕಾರಿ ಪುನಿತ ಓಲೇಕಾರ ಮಾತನಾಡಿ, ಇಂದು ಆಧುನಿಕ ತಂತ್ರಜ್ಞಾನ ಮುಂದುವರೆದಂತೆ ಜ್ಞಾನದ ವಿಕಸ ಹೊಂದಬೇಕು. ಈ ಉದ್ದೇಶದಿಂದ ಹೇಮಾವತಿ ಅಮ್ಮನವರು ಆರೋಗ್ಯ, ಶಿಕ್ಷಣ, ಕಾನೂನು, ಪೌಷ್ಠಿಕ ಆಹಾರ ಕುರಿತು ಮಾಹಿತಿ, ಮಹಿಳಾ ವಿಚಾರ ಗೋಷ್ಠಿ, ವಾತ್ಸಲ್ಯ ಯೋಜನೆ ಮೂಲಕ ಬಡವರಿಗೆ ದೀನ-ದಲಿತರಿಗೆ, ಸ್ವ ಉದ್ಯೋಗಕ್ಕೆ ಸಹಾಯ ನೀಡುತ್ತ ಮಹಿಳೆಯರಲ್ಲಿ ಆತ್ಮಸ್ಥೈರ್ಯ ನೀಡುವ ಮೂಲಕ ಮಹಿಳೆಯರ ಬದುಕಿಗೆ ಹಾಗೂ ಕುಟುಂಬದ ಆರ್ಥಿಕ ಅಭಿವೃದ್ಧಿಗೆ ಸಹಕಾರ ನೀಡುತ್ತಿದ್ದಾರೆ ಎಂದರು.

ಡಾ. ಎಸ್.ಸಿ. ಚವಡಿ ಮಾತನಾಡಿ, ಮಹಿಳೆಯರು ಅಭಿವೃದ್ಧಿ ಹೊಂದಿದರೆ ಸಮಾಜದ ಅಭಿವೃದ್ಧಿ ಹೊಂದಿದಂತೆ. ಮನೆಯ ಮಕ್ಕಳು ಹಿರಿಯರನ್ನು ಅನುಕರಣೆ ಮಾಡುತ್ತಾರೆ. ಹಿರಿಯರು ಮನೆಯಲ್ಲಿ ಸಂಸ್ಕಾರಯುತ ಬದುಕು ಕಟ್ಟಿಕೊಳ್ಳಬೇಕು. ಇದರಿಂದ ಸಮಾಜದ ಸ್ವಾಸ್ಥ್ಯ ಕಾಪಾಡಲು ಸಾಧ್ಯವಾಗುತ್ತದೆ ಎಂದರು.

ಪುನಿತ ಓಲೇಕಾರ, ಪ್ರಕಾಶ ಮದ್ದಿನ, ಮಹೇಶ ನೀಲಗುಂದ, ಸಂಘದ ಮೇಲ್ವಿಚಾರಕಿ ಶಾಂತಾ ಹಾಗೂ ಮಹಿಳಾ ಸ್ವ-ಸಹಾಯ ಸಂಘದ ಸದಸ್ಯರು ಇದ್ದರು.

## ವಿಜ್ಞಾನ ವಸ್ತು ಪ್ರದರ್ಶನ: ಗಮನಸೆಳೆದ ಮಾದರಿಗಳು

# ವೈಜ್ಞಾನಿಕ ಮನೋಭಾವ ಬೆಳೆಸಿಕೊಳ್ಳಲು ಸಲಹೆ



ಪ್ರದರ್ಶನದಲ್ಲಿ ಮಳೆನೀರು ಸಂಗ್ರಹಣೆ ಮತ್ತು ಮರುಬಳಕೆ (ಮಳೆನೀರು ಕೊಯ್ಲು), ಕೃಷಿಯಲ್ಲಿ ನೀರಿನ ಉಳಿತಾಯಕ್ಕೆ ನೆರವಾಗುವ ಸ್ಮಾರ್ಟ್ ವಾಟರ್ ವ್ಯವಸ್ಥೆ, ತ್ಯಾಜ್ಯ ನೀರು ಶುದ್ಧೀಕರಣ ಮಾದರಿ, ಭೂಮಿಯ ತಾಪಮಾನ ಏರಿಕೆಯನ್ನು ವಿವರಿಸುವ ಹಸಿರುಮನೆ ಪರಿಣಾಮ, ರಾಕೆಟ್ ಮಾದರಿ ಮತ್ತು ಬಾಹ್ಯಾಕಾಶ ಸಂಶೋಧನೆ, ಸೌರವ್ಯೂಹದ ಚಲನಾ ಮಾದರಿ, ಸಸ್ಯ ಮತ್ತು ಪ್ರಾಣಿ ಜೀವಕೋಶಗಳ ಒಳರಚನೆ, ಆಟೋಮ್ಯಾಟಿಕ್ ಫಿಲ್ಲಿಂಗ್ ಮಷಿನ್, ಹಾಗೂ ಸ್ಮಾರ್ಟ್ ಗೋ ಹೌಸ್ (ಸ್ವಯಂಚಾಲಿತ ಗೋಶಾಲೆ ವ್ಯವಸ್ಥೆ) ಸೇರಿದಂತೆ ಅನೇಕ ಸೃಜನಾತ್ಮಕ ಮಾದರಿಗಳನ್ನು ವಿದ್ಯಾರ್ಥಿಗಳು ಪ್ರದರ್ಶಿಸಿದರು. ತಮ್ಮ ಮಾದರಿಗಳ ಕಾರ್ಯವಿಧಾನವನ್ನು ಅವರು ಆತ್ಮವಿಶ್ವಾಸದಿಂದ ವಿವರಿಸಿ ಎಲ್ಲರ ಮೆಚ್ಚುಗೆಗೆ ಪಾತ್ರರಾದರು.

■ವಿಜಯಸಾಕ್ಷಿ ಸುದ್ದಿ, ಗಜೇಂದ್ರಗಡ

ವಿಜ್ಞಾನ ವಸ್ತು ಪ್ರದರ್ಶನದಂತಹ ವೇದಿಕೆಗಳು ವಿದ್ಯಾರ್ಥಿಗಳಲ್ಲಿ ವೈಜ್ಞಾನಿಕ ಮನೋಭಾವ ಬೆಳೆಸುವುದರ ಜೊತೆಗೆ ಸೃಜನಶೀಲತೆ, ಕೌಶಲ ಹಾಗೂ ಕ್ರಿಯಾಶೀಲತೆಯನ್ನು ಹೊರಹಾಕಲು ಉತ್ತಮ ಅವಕಾಶ ಕಲ್ಪಿಸುತ್ತವೆ ಎಂದು ಗದಗ ಉಪಪ್ರಾದೇಶಿಕ ವಿಜ್ಞಾನ ಕೇಂದ್ರ ಹಾಗೂ ತಾರಾಲಯದ ವಿಷಯ ಪರಿವೀಕ್ಷಕರು (ವಿಜ್ಞಾನ) ಮತ್ತು ನೋಡಲ್ ಅಧಿಕಾರಿಗಳಾದ ಎಸ್. ಎಚ್. ಬಂಡಿವಡ್ಡರ ಹೇಳಿದರು.

ಗದಗ ಜಿಲ್ಲಾಡಳಿತ, ಕ್ಷೇತ್ರ ಶಿಕ್ಷಣಾಧಿಕಾರಿಗಳ ಕಚೇರಿ ರೋಣ ಹಾಗೂ ಗದಗ ಉಪಪ್ರಾದೇಶಿಕ ವಿಜ್ಞಾನ ಕೇಂದ್ರ ಮತ್ತು ತಾರಾಲಯದ ಆಶ್ರಯದಲ್ಲಿ ಗಜೇಂದ್ರಗಡ ತಾಲೂಕಿನ ಗೋಗೇರಿ ಗ್ರಾಮದ ಸರ್ಕಾರಿ ಪ್ರಾಥಮಿಕ ಶಾಲೆಯಲ್ಲಿ ಇತ್ತೀಚೆಗೆ ಆಯೋಜಿಸಿದ್ದ ವಿಜ್ಞಾನ ವಸ್ತು ಪ್ರದರ್ಶನ ಕಾರ್ಯಕ್ರಮಕ್ಕೆ ಚಾಲನೆ ನೀಡಿ ಅವರು ಮಾತನಾಡಿದರು.

ವಿಜ್ಞಾನವನ್ನು ಕೇವಲ ಪಾಠಪುಸ್ತಕಗಳಲ್ಲಿನ ವಿಷಯವಾಗಿ ನೋಡುವುದಕ್ಕಿಂತ ಸಾಮಾಜಿಕ ಸಮಸ್ಯೆಗಳ ಪರಿಹಾರದ ಸಾಧನವಾಗಿ ಬಳಸಿಕೊಳ್ಳಬೇಕು. ಆಧುನಿಕ ಯುಗದಲ್ಲಿ ವಿಜ್ಞಾನ ಮತ್ತು ತಂತ್ರಜ್ಞಾನ ವೇಗವಾಗಿ ಬೆಳೆಯುತ್ತಿರುವ ಹಿನ್ನೆಲೆಯಲ್ಲಿ ಮಕ್ಕಳಿಗೆ ಪ್ರಾಯೋಗಿಕ ಅಧ್ಯಯನ ಹಾಗೂ ವೈಜ್ಞಾನಿಕ ಚಟುವಟಿಕೆಗಳು ಅಗತ್ಯವಾಗಿವೆ. ವಿದ್ಯಾರ್ಥಿ ಜೀವನದಿಂದಲೇ ವೈಜ್ಞಾನಿಕ ಮನೋಭಾವ ಬೆಳೆಸಿಕೊಂಡರೆ ದೇಶದ ಅಭಿವೃದ್ಧಿಯಲ್ಲಿ ಸಕ್ರಿಯ ಪಾತ್ರವಹಿಸಲು ಸಾಧ್ಯವಾಗುತ್ತದೆ ಎಂದು ಅವರು ತಿಳಿಸಿದರು.

ವಿದ್ಯಾರ್ಥಿಗಳಲ್ಲಿ ಸುಪ್ತವಾಗಿ ಅಡಗಿರುವ ಪ್ರತಿಭೆಯನ್ನು ಅನಾವರಣಗೊಳಿಸಲು ಹಾಗೂ ವಿಜ್ಞಾನ, ಗಣಿತ ಮತ್ತು ತಂತ್ರಜ್ಞಾನ ವಿಷಯಗಳತ್ತ ಆಸಕ್ತಿ ಮೂಡಿಸಲು ಇಂತಹ ಪ್ರದರ್ಶನಗಳನ್ನು ಹಮ್ಮಿಕೊಳ್ಳಲಾಗುತ್ತದೆ. ಈ ಬಾರಿ ವಿವಿಧ ಶಾಲೆಗಳ ವಿದ್ಯಾರ್ಥಿಗಳು ತಾವೇ ಸಿದ್ಧಪಡಿಸಿದ ಮಾದರಿಗಳು ನೋಡುಗರ ಗಮನಸೆಳೆದವು.

ಕಾರ್ಯಕ್ರಮದಲ್ಲಿ ಕೆ. ಎಸ್. ಕೊಡತಗೇರಿ, ಪ್ರೌಢಶಾಲೆಯ ಮುಖ್ಯ ಶಿಕ್ಷಕಿ ಟಿ. ಸಿ. ನಾಗನೂರ, ಪ್ರಾಥಮಿಕ ಶಾಲೆಯ ಮುಖ್ಯ ಶಿಕ್ಷಕಿ ಬಿ. ವಿ. ಅಂಗಡಿ, ಭಾಗ್ಯಶ್ರೀ ಎಂ, ಗವಿ ಭೋಸಲೆ, ದುರಗಪ್ಪ ಬೂದಿಹಾಳ ಸೇರಿದಂತೆ ಗಣ್ಯರು ಉಪಸ್ಥಿತರಿದ್ದರು. ಸರ್ಕಾರಿ ಹಿರಿಯ ಪ್ರಾಥಮಿಕ ಶಾಲೆ ನಾಗರಸಿಕೊಪ್ಪ, ಸರ್ಕಾರಿ ಪ್ರೌಢಶಾಲೆ ಗೋಗೇರಿ, ಸರ್ಕಾರಿ ಉರ್ದು ಹಿರಿಯ ಪ್ರಾಥಮಿಕ ಶಾಲೆ ಗೋಗೇರಿ ಹಾಗೂ ಸರ್ಕಾರಿ ಕಿರಿಯ ಪ್ರಾಥಮಿಕ ಶಾಲೆ ಬಡಾವಣೆ ಗೋಗೇರಿ ವಿದ್ಯಾರ್ಥಿಗಳು ಮತ್ತು ಶಿಕ್ಷಕರು ಕಾರ್ಯಕ್ರಮದಲ್ಲಿ ಭಾಗವಹಿಸಿದರು.

# ವಚನಗಳಿಗೆ ಕಾನೂನಾತ್ಮಕ ಸಶಕ್ತೀಕರಣಕ್ಕೆ ಸರ್ಕಾರದ ಚಿಂತನೆ

▸▸ಮೊದಲನೇ ಪುಟದಿಂದ

ಮಹಾಸ್ವಾಮಿಗಳು ರೈತಪ್ರೇಮಿಗಳು ಹಾಗೂ ಜಾನಪದ, ಕಲೆ, ಸಂಗೀತ-ಸಾಹಿತ್ಯದ ಪ್ರೋತ್ಸಾಹಕರು ಎಂದು ಹೇಳಲು ಹೆಮ್ಮೆ ಎನಿಸುತ್ತದೆ. ನಾನು ಶಾಸಕನಾಗಿದ್ದ ಅವಧಿಯಲ್ಲಿ ನನ್ನ ಕಾರ್ಯಗಳನ್ನು ಮೆಚ್ಚಿ ಮನಸಾರೆ ಅಭಿನಂದಿಸಿ ಆಶೀರ್ವದಿಸುತ್ತಿದ್ದ ಶ್ರೀಗಳ ಜವಾರಿ ಭಾಷೆ, ಗಟ್ಟಿ ಧ್ವನಿಯನ್ನು ನಾನು ಮರೆಯಲು ಸಾಧ್ಯವಿಲ್ಲ. ಅವರಿಂದ ಅನೇಕ ನುಡಿಮುತ್ತುಗಳನ್ನು, ಭಾಷೆಯ ಪ್ರಯೋಗವನ್ನು ನಾನು ಕಲಿತಿದ್ದೇನೆ ಎಂದರು.

ಡಿ.ಸಿ. ಪಾವಟೆ ಶಿಕ್ಷಣ ವ್ಂಹಾವಿದ್ಯಾಲಂ್ಂದ ಪ್ರಶಿಕ್ಷಣಾರ್ಥಿಗಳಿಂದ ವಚನ ನೃತ್ಯ ಜರುಗಿತು. ಕಾರ್ಯಕ್ರಮದ ಸಾನ್ನಿಧ್ಯ ವಹಿಸಿದ್ದ ಡಾ.ತೋಂಟದ ಸಿದ್ಧರಾಮ ಮಹಾಸ್ವಾಮಿಗಳು ಆಶೀರ್ವಚನ ನೀಡಿದರು.

ಡಾ. ಎಂ.ಎಂ. ಕಲಬುರ್ಗಿ ಅಧ್ಯಯನ ಸಂಸ್ಥೆಯಿಂದ ಪ್ರಕಟಗೊಂಡ 'ತೋಂಟ-ದಾರ್ಯ ಸಂಸ್ಥಾನಮಠ ಸಾಹಿತ್ಯ ಪ್ರಕಟಣೆಗಳು; ತಾತ್ವಿಕ ಸ್ವರೂಪ', 'ಮಾಯದಂಥಾ ಬೆಳದಿಂಗಳ', 'ಚಲವಾದಿ ಗೌರಮ್ಮನ ಕಥೆಗಳು' ಗ್ರಂಥಗಳು ಲೋಕಾರ್ಪಣೆಗೊಂಡವು. ತೆ-ಂಟದಾರ್ಯ ಮಠದ 'ವಚನ ಪಾಠಶಾಲೆ'ಯ ಉದ್ಘಾಟನೆ ನೆರವೇರಿತು.

ತೋಂಟದಾರ್ಯ ವಿದ್ಯಾಪೀಠದ ಕಾರ್ಯದರ್ಶಿಗಳಾದ ಪ್ರೊ. ಎಸ್.ಎಸ್. ಪಟ್ಟಣಶೆಟ್ಟರ ಪ್ರಾಸ್ತಾವಿಕವಾಗಿ ಮಾತನಾಡಿದರು.

ಭೈರನಹಟ್ಟಿ ಮಠದ ಶಾಂತಲಿಂಗ ಮಹಾಸ್ವಾಮಿಗಳು, ಆಳಂದದ ಕೋರಣೇಶ್ವರ ಮಹಾಸ್ವಾಮಿಗಳು ಸಮ್ಮುಖವಹಿಸಿದ್ದರು.

ವೇದಿಕೆ ಮೇಲೆ ಮಾಜಿ ಸಚಿವರಾದ ಎಸ್.ಎಸ್. ಪಾಟೀಲ, ಮಾಜಿ ಸಂಸದರಾದ ಐ.ಜಿ. ಸನದಿ, ಮಾಜಿ ಶಾಸಕರಾದ ಸೀಮಾ ಮಸೂತಿ, ಲಿಂಗಾಯತ ಪ್ರಗತಿಶೀಲ ಸಂಘದ ಅಧ್ಯಕ್ಷ ಬಾಲಚಂದ್ರ ಭರಮಗೌಡರ, ತೋಂಟದಾರ್ಯ ಜಾತ್ರಾ ಸಮಿತಿ ಅಧ್ಯಕ್ಷರಾದ ವಿನಾಯಕ ಮಾನ್ವಿ, ಶಶಿ ಸಾಲಿ, ಹೇಮಾ ಪಟ್ಟಣಶೆಟ್ಟಿ, ಗ್ರಂಥಗಳ ಲೇಖಕರಾದ ಶಶಿಧರ ತೋಡಕರ, ವಿದ್ಯಾವತಿ ಅಕ್ಕಿ, ವೆಂಕಟಾಪೂರ ಶರಣರು ಮುಂತಾದವರು ಹಾಜರಿದ್ದರು.

## ಸಂಗೊಳ್ಳಿ ರಾಯಣ್ಣನವರ ಪುತ್ಥಳಿಗೆ ಮಸಿ; ಕಿಡಿಗೇಡಿಯನ್ನು ಕೂಡಲೇ ಬಂಧಿಸಿ

■ ವಿಜಯಸಾಕ್ಷಿ ಸುದ್ದಿ, ಗದಗ



ಬೆಳಗಾವಿ ನಗರದ ಮಚ್ಚೆ ಆವರಣದಲ್ಲಿ ಅಪ್ಪಟ ದೇಶಭಕ್ತ ಶ್ರೀ ಕ್ರಾಂತಿವೀರ ಸಂಗೊಳ್ಳಿ ರಾಯಣ್ಣನವರ ಪುತ್ಥಳಿಗೆ ಮಸಿ ಬೆಳಿದಿರುವ ಕಿಡಿಗೇಡಿಯನ್ನು ಕೂಡಲೇ ಬಂಧಿಸಿ ಕಠಿಣ ಶಿಕ್ಷೆಗೆ ಒಳಪಡಿಸಬೇಕು ಎಂದು ಕ್ರಾಂತಿಸೇನಾ ಜಿಲ್ಲಾ ಪ್ರಧಾನ ಕಾರ್ಯದರ್ಶಿ ಪ್ರವೀಣ ಹಬೀಬ ಆಗ್ರಹಿಸಿದ್ದಾರೆ.

ಈ ಬಗ್ಗೆ ಪತ್ರಿಕಾ ಹೇಳಿಕೆ ನೀಡಿರುವ ಅವರು, ಅಪ್ಪಟ ದೇಶಭಕ್ತ, ದೇಶದ ಉಳಿವಿಗಾಗಿ, ಕನ್ನಡ ನೆಲ-ಜಲಕ್ಕಾಗಿ ಬ್ರಿಟಿಷರ ವಿರುದ್ಧ ಸಮರ ಸಾರಿ ತಮ್ಮ ಪ್ರಾಣವನ್ನೇ ತ್ಯಾಗ ಮಾಡಿರುವ ಅಪ್ರತಿಮ ಕ್ರಾಂತಿಕಾರಿ ಕ್ರಾಂತಿವೀರ ಸಂಗೊಳ್ಳಿ ರಾಯಣ್ಣನವರ ಪುತ್ಥಳಿಗೆ ಮಸಿ ಬೆಳಿದಿರುವ ಘಟನೆ ನಡೆದಿದೆ. ಇದು ಅತ್ಯಂತ ಖಂಡನೀಯ. ಇದು ಕ್ರಾಂತಿವೀರ ಸಂಗೊಳ್ಳಿ ರಾಯಣ್ಣನವರ ಅಭಿಮಾನಿಗಳಿಗೆ ಹಾಗೂ ದೇಶಾಭಿಮಾನಿಗಳಿಗೆ ತುಂಬಾ ಆಘಾತ ಉಂಟು ಮಾಡಿದೆ. ಈ ಕೂಡಲೇ ಬೆಳಗಾವಿಯ ಪೊಲೀಸ್ ವರಿಷ್ಠಾಧಿಕಾರಿಗಳು ಕಿಡಿಗೇಡಿಯನ್ನು ಬಂಧಿಸಿ ಕಠಿಣ ಶಿಕ್ಷೆಗೆ ಒಳಪಡಿಸಬೇಕು ಎಂದು ಆಗ್ರಹಿಸಿದ್ದಾರೆ.

## ಡಾ. ಪದ್ಮಾರಿಗೆ 'ಕನ್ನಡದ ಸೇವಾರತ್ನ' ಪ್ರಶಸ್ತಿ

■ ವಿಜಯಸಾಕ್ಷಿ ಸುದ್ದಿ, ಗದಗ



ಮಹಾರಾಷ್ಟ್ರ ಮಂಡಳಿ, ಎನ್.ಎಂ.ಆರ್. ಸ್ಕ್ಯಾನ್ ಸೆಂಟರ್ ಬಿಲ್ಡಿಂಗ್, ಕೋರ್ಟ ಸರ್ಕಲ್, ಕ್ಲಬ್ ರೋಡ ಹುಬ್ಬಳ್ಳಿಯ ಸಂಗೀತ ನೃತ್ಯ ಕಲಾನಿಕೇತನ ಟ್ರಸ್ಟ್, ನಕ್ಷತ್ರ ಫೌಂಡೇಶನ್ ಹುಬ್ಬಳ್ಳಿ ವತಿಯಿಂದ ಗದುಗಿನ ಕಲಾವಿದೆ ಡಾ. ಪದ್ಮಾ ಜೆ.ಕಬಾಡಿ ಅವರ ಸಾಹಿತ್ಯ, ಸಾಂಸ್ಕೃತಿಕ ಸೇವೆಗಳನ್ನು ಪರಿಗಣಿಸಿ ಫೆ. 22ರಂದು ರಾಜ್ಯ ಮಟ್ಟದ 'ಕನ್ನಡದ ಸೇವಾರತ್ನ ಪ್ರಶಸ್ತಿ' ನೀಡಿ ಗೌರವಿಸಲಾಗುವುದು ಎಂದು ನಕ್ಷತ್ರ ಫೌಂಡೇಶನ್ ಕರ್ನಾಟಕ ರಾಜ್ಯಾಧ್ಯಕ್ಷರಾದ ಪುಷ್ಪ ಹಿರೇಮಠ ಅವರು ಪತ್ರಿಕಾ ಪ್ರಕಟಣೆಯ ಮೂಲಕ ತಿಳಿಸಿದ್ದಾರೆ.

### ಬೇಸಿಗೆ ವಿಪತ್ತು ನಿರ್ವಹಣೆಯ ಸಭೆಯಲ್ಲಿ ಜಿಲ್ಲಾಧಿಕಾರಿ ಸ್ನೇಹಲ್ ಆರ್ ಸೂಚನೆ

# ಸಾರ್ವಜನಿಕರಲ್ಲಿ ಜಾಗೃತಿ ಕಾರ್ಯಕ್ರಮಗಳನ್ನು ಕೈಗೊಳ್ಳಿ

■ ವಿಜಯಸಾಕ್ಷಿ ಸುದ್ದಿ, ಧಾರವಾಡ

ಪ್ರಸಕ್ತ ಸಾಲಿನ ಮಾರ್ಚ್‌ನಿಂದ ಮೇ ತಿಂಗಳವರೆಗೆ ಬೇಸಿಗೆ ಹೆಚ್ಚಾಗುವ ಮುನ್ಸೂಚನೆಯನ್ನು ರಾಜ್ಯ ಹವಾಮಾನ ಇಲಾಖೆಯು ಈಗಾಗಲೇ ನೀಡಿರುವದರಿಂದ ಜಿಲ್ಲೆಯಲ್ಲಿ ಬೇಸಿಗೆ ಅವಧಿಯಲ್ಲಿ ಜನ-ಜಾನುವಾರುಗಳಿಗೆ ಕುಡಿಯುವ ನೀರಿನ ಕೊರತೆ ಆಗದಂತೆ ಹಾಗೂ ಜಾನುವಾರುಗಳಿಗೆ ಮೇವಿನ ಕೊರತೆ ಉಂಟಾಗದಂತೆ ಮುನ್ನಚ್ಚರಿಕೆ ವಹಿಸಿ, ಅಗತ್ಯ ದಾಸ್ತಾನು ಮತ್ತು ಪರಿಹಾರ ಕ್ರಮಗಳನ್ನು ಅಧಿಕಾರಿಗಳು ಕೈಗೊಳ್ಳಬೇಕು ಎಂದು ಜಿಲ್ಲಾ ವಿಪತ್ತು ನಿರ್ವಹಣಾ ಪ್ರಾಧಿಕಾರದ ಅಧ್ಯಕ್ಷರೂ ಆಗಿರುವ ಜಿಲ್ಲಾಧಿಕಾರಿ ಸ್ನೇಹಲ್ ಆರ್ ತಿಳಿಸಿದರು.

ಅವರು ಶನಿವಾರ ಮಧ್ಯಾಹ್ನ ಜಿಲ್ಲಾಧಿಕಾರಿಗಳ ನೂತನ ಸಭಾಂಗಣದಲ್ಲಿ 2026ನೇ ಸಾಲಿನ ಬೇಸಿಗೆ ಅವಧಿಯಲ್ಲಿ ಜನ-ಜಾನುವಾರಗಳಿಗೆ ಕುಡಿಯುವ ನೀರು, ಮೇವು ಸಂಗ್ರಹಣೆ ಹಾಗೂ ಅತಿಯಾದ ಬಿಸಿಲಿನಿಂದ ಕೈಗೊಳ್ಳುವ ಮುನ್ನಚ್ಚರಿಕೆ ಕ್ರಮಗಳ ಕುರಿತು ಜಿಲ್ಲಾ ವಿಪತ್ತು ನಿರ್ವಹಣಾ ಪ್ರಾಧಿಕಾರದ ಸಭೆ ಜರುಗಿಸಿ ಮಾತನಾಡಿದರು.



ಈಗಾಗಲೇ ಧಾರವಾಡ ತಾಲೂಕಿನ ಹೊಸಟ್ಟಿ, ಮಂಡಿಹಾಳ, ಮನಗುಂಡಿ ಮತ್ತು ಹುಬ್ಬಳ್ಳಿ ತಾಲೂಕಿನ ನೂಲ್ವಿ ಗ್ರಾಮಗಳಿಗೆ ಬಾಡಿಗೆ ಬೋರ್‌ವೆಲ್ ಮೂಲಕ ನೀರು ಸರಬರಾಜು ಮಾಡಲಾಗುತ್ತಿದೆ. ಜಿಲ್ಲೆಯಲ್ಲಿ ಜಾನುವಾರುಗಳಿಗೆ ಅಗತ್ಯ ಇರುವ ಮೇವು ದಾಸ್ತಾನು ಹೊಂದಲಾಗಿದೆ. ಬೇಸಿಗೆ ಅವಧಿಯಲ್ಲಿ ಸರಬರಾಜು ಮಾಡಲು ಮುಂದಿನ 28 ವಾರಗಳಿಗೆ ಅಗತ್ಯವಿರುವಷ್ಟು ಮೇವನ್ನು ಜಿಲ್ಲೆಯಲ್ಲಿ ದಾಸ್ತಾನು ಹೊಂದಲಾಗಿದೆ ಎಂದು ಜಿಲ್ಲಾಧಿಕಾರಿ ಸ್ನೇಹಲ್ ಆರ್ ತಿಳಿಸಿದರು.

ಹವಾಮಾನ ಇಲಾಖೆಯ ಮುನ್ಸೂಚನೆಯಂತೆ ಜಿಲ್ಲೆಯಲ್ಲಿ ಪ್ರಸಕ್ತ ಸಾಲಿನ ಬೇಸಿಗೆಯಲ್ಲಿ ಬಿಸಿಗಾಳಿ ಹೆಚ್ಚಾಗಿರಲಿದೆ. ವಿಶೇಷವಾಗಿ ಏಪ್ರಿಲ್, ಮೇ ತಿಂಗಳಿನಲ್ಲಿ ಉಷ್ಣಾಂಶವು 35ರಿಂದ 40 ಡಿಗ್ರಿ ಸೆಲ್ಸಿಯಸ್ ಇರುವ ಬಗ್ಗೆ ವರದಿ ಇದೆ. ಈ ಕುರಿತು ನಗರ ಮತ್ತು ಗ್ರಾಮಗಳಲ್ಲಿ ಐಇಸಿ ಕಾರ್ಯ ಚಟುವಟಿಕೆಗಳ ಮೂಲಕ ಸಾರ್ವಜನಿಕರಲ್ಲಿ ಜಾಗೃತಿ ಕಾರ್ಯಕ್ರಮಗಳನ್ನು ಕೈಗೊಳ್ಳಬೇಕೆಂದು ಹೇಳಿದರು.

ಮಹಾನಗರ ಪಾಲಿಕೆ ಆಯುಕ್ತ ಡಾ. ರುದ್ರೇಶ ಘಾಳಿ ಮಾತನಾಡಿ, ಹುಬ್ಬಳ್ಳಿ-ಧಾರವಾಡ ಮಹಾನಗರ ಪಾಲಿಕೆಯ ವ್ಯಾಪ್ತಿಯಲ್ಲಿ 82 ವಾರ್ಡ್‌ಗಳಿದ್ದು, 13 ವಾರ್ಡ್‌ಗಳಿಗೆ ನಿರಂತರ ನೀರು ಯೋಜನೆಯಡಿ ದಿನದ 24 ಗಂಟೆ ನೀರು ಸರಬರಾಜು ವ್ಯವಸ್ಥೆ ಇದೆ ಎಂದು ಹೇಳಿದರು.

ಜಿಲ್ಲಾ ನಗರಾಭಿವೃದ್ಧಿ ಕೋಶದ ಯೋಜನಾ ನಿರ್ದೇಶಕ ಅಜೀಜ್ ದೇಸಾಯಿ, ಗ್ರಾಮೀಣ ಕುಡಿಯುವ ನೀರು ಪೂರೈಕೆ ಇಲಾಖೆಯ ಕಾರ್ಯಪಾಲಕ ಅಭಿಯಂತರ ಜಗದೀಶ ಪಾಟೀಲ, ಪಶು ಪಾಲನೆ ಇಲಾಖೆಯ ಉಪನಿರ್ದೇಶಕ ಡಾ. ಎಸ್.ವಿ. ಸಂತಿ, ಕೃಷಿ ಇಲಾಖೆಯ ಜಂಟಿ ನಿರ್ದೇಶಕ ಮಂಜುನಾಥ ಅಂತರವಳ್ಳಿ, ಜಿಲ್ಲಾ ಆರೋಗ್ಯಾಧಿಕಾರಿ ಡಾ. ಎಸ್.ಎಂ. ಹೊನಕೇರಿ, ತಹಸೀಲ್ದಾರ ಡಾ. ಡಿ.ಎಚ್. ಹೂಗಾರ, ಮಹೇಶ ಗಸ್ತಿ, ಜೆ.ಬಿ. ಮಜ್ಜಗಿ, ಸುಧೀರ ಸಾವುಕಾರ, ಬಸವರಾಜ ಹೊಂಕಣನವರ, ಎಮ್.ಜಿ. ದಾಸಪ್ಪನವರ, ರಾಜು ಮಾವರಕರ್ ಬೇಸಿಗೆ ಅವಧಿಯ ಸುರಕ್ಷತಾ ಕ್ರಮಗಳನ್ನು ವಿವರಿಸಿದರು.

ಅಪರ ಜಿಲ್ಲಾಧಿಕಾರಿ ಗೀತಾ ಸಿ.ಡಿ ಸ್ವಾಗತಿಸಿದರು. ಜಿಲ್ಲಾ ವಿಪತ್ತು ನಿರ್ವಹಣಾ ಕೋಶದ ಸಮಾಲೋಚಕ ವೆಂಕಟೇಶ ಗುಳ್ಳಾ ಪ್ರಾಸ್ತಾವಿಕವಾಗಿ ಮಾತನಾಡಿದರು.

ಜಿ.ಪಂ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಭುವನೇಶ ಪಾಟೀಲ ಮಾತನಾಡಿ, ನವಲಗುಂದ, ಅಣ್ಣಿಗೇರಿ, ಹುಬ್ಬಳ್ಳಿ ಮತ್ತು ಕುಂದಗೋಳ ತಾಲೂಕಿನ 160 ಗ್ರಾಮಗಳಿಗೆ ಕುಡಿಯುವ ನೀರು ಪೂರೈಸಲು 60 ಕೆರೆಗಳು ಇವೆ. ಈ ಪೈಕಿ 40 ಕೆರೆಗಳನ್ನು ಈಗಾಗಲೇ ಮಲಪ್ರಭಾ ಬಲದಂಡೆ ಕಾಲುವೆ ಮೂಲಕ ನೀರು ತುಂಬಿಸಲಾಗಿದೆ. ಮತ್ತು 10 ಕೆರೆಗಳು ಶೇ. 75ಕ್ಕಿಂತ ಹೆಚ್ಚು ನೀರು ತುಂಬಿವೆ. ನವಲಗುಂದ ತಾಲೂಕಿನ ಗೊಬ್ಬರಗುಂಪಿ ಗ್ರಾಮದ ಕೆರೆ ಹೂಳೆತ್ತೆವ ಕಾರ್ಯದ ನಿಮಿತ್ತ ನೀರು ಹರಿಸಿರಲಿಲ್ಲ. ಮುಂದಿನ ದಿನಗಳಲ್ಲಿ ಈ ಕೆರೆಯನ್ನು ಭರ್ತಿ ಮಾಡಲು ಕ್ರಮ ಕೈಗೊಳ್ಳಲಾಗುವುದು ಎಂದು ತಿಳಿಸಿದರು.

## ಕಷ್ಟಪಟ್ಟು ಓದಬೇಡಿ, ಇಷ್ಟಪಟ್ಟು ಓದಿ



■ ವಿಜಯಸಾಕ್ಷಿ ಸುದ್ದಿ, ನರೇಗಲ್ಲ

ವಿದ್ಯಾರ್ಥಿಗಳು ತಮ್ಮ ಅಭ್ಯಾಸವನ್ನು ಇಷ್ಟಪಟ್ಟು ಮಾಡಬೇಕೇ ಹೊರತು ಕಷ್ಟಪಟ್ಟು ಮಾಡಬಾರದು. ಕೆಲವೇ ದಿನಗಳಲ್ಲಿ ಎಸ್‌ಎಸ್‌ಎಲ್‌ಸಿ ಪರೀಕ್ಷೆ ಎದುರಿಸುತ್ತಿರುವ ನೀವು ಕಷ್ಟಪಟ್ಟು ಓದದೆ ಇಷ್ಟಪಟ್ಟು ಓದಿ ಪರೀಕ್ಷೆಯಲ್ಲಿ ಉತ್ತಮ ಸಾಧನೆ ಮಾಡಿ ಎಂದು ನಿವೃತ್ತ ಮುಖ್ಯ ಶಿಕ್ಷಕ ಅರುಣ ಕುಲಕರ್ಣಿ ಹೇಳಿದರು.


ಪಟ್ಟಣದ ಎಸ್‌ಎವಿ ಬಾಲಿಕೆಯರ ಪ್ರೌಢಶಾಲೆಯಲ್ಲಿ ಜರುಗಿದ ಶ್ರೀ ಸರಸ್ವತಿ ಪೂಜೆ ಹಾಗೂ ಎಸ್‌ಎಸ್‌ಎಲ್‌ಸಿ ವಿದ್ಯಾರ್ಥಿನಿಯರ ಬೀಳ್ಕೊಡುಗೆ ಸಮಾರಂಭದಲ್ಲಿ ಅವರು ಮಾತನಾಡಿದರು.

ವಿದ್ಯೆ ಯಾರ ಸ್ವತ್ತೂ ಅಲ್ಲ. ಅದು ಸಾಧಕನ ಕೈವಶವಾಗುತ್ತದೆ. ನೀವು ಸಾಧಕರಾದಾಗ ಮಾತ್ರ ನಿಮ್ಮ ಓದಿಗೆ ಒಂದು ಬೆಲೆ ಬರುತ್ತದೆ. ಓದಿನೊಂದಿಗೆ ನೀವು ನಿಮ್ಮ ಜೀವನದಲ್ಲಿ ಮಾನವೀಯ ಮತ್ತು ನೈತಿಕ ಮೌಲ್ಯಗಳನ್ನು ಬೆಳೆಸಿಕೊಂಡು ಜೀವನವನ್ನು ಅರಳಿಸಿಕೊಳ್ಳಬೇಕು. ನೀವು ಕಲಿತ ಶಾಲೆಯನ್ನು, ಕಲಿಸಿದ ಗುರುಗಳನ್ನು ಎಂದಿಗೂ ಮರೆಯದೆ ಜೀವನದುದ್ದಕ್ಕೂ ನೆನಪಿಟ್ಟುಕೊಂಡು ಅವರು ಹೇಳಿದ ನೀತಿಗಳ ಅಡಿಯಲ್ಲಿ ಜೀವನ ಸಾಗಿಸಿ ಬದುಕನ್ನು ಸಾರ್ಥಕಪಡಿಸಿಕೊಳ್ಳಬೇಕೆಂದರು.

ಕಳೆದ ಸಾಲಿನ ಎಸ್‌ಎಸ್‌ಎಲ್‌ಸಿ ವಿದ್ಯಾರ್ಥಿಗಳಿಗೆ, 8 ಮತ್ತು 9ನೇ ತರಗತಿಯ ಪ್ರತಿಭಾವಂತರಿಗೆ ಸನ್ಮಾನ ಜರುಗಿತು. ಸಭೆಯನ್ನುದ್ದೇಶಿಸಿ ಶಿಕ್ಷಕ ಎ.ಟಿ. ಮಳ್ಳಳ್ಳಿ, ಬಿ.ಡಿ. ಯರಗೊಪ್ಪ ಮಾತನಾಡಿದರು. ಮುಖ್ಯ ಶಿಕ್ಷಕ ಸಂಗಮೇಶ ಹೂಲಗೇರಿ ಸ್ವಾಗತಿಸಿದರು. ಆಡಳಿತ ಮಂಡಳಿ ಅಧ್ಯಕ್ಷ ವೀರಣ್ಣ ಹಳ್ಳಿ ಅಧ್ಯಕ್ಷತೆ ವಹಿಸಿದ್ದರು. ಸದಸ್ಯರಾದ ನಿಂಗನಗೌಡ ಲಕ್ಕನಗೌಡ್ರ, ಎಂ.ಪಿ. ತಳಬಾಳ, ಷಣ್ಮುಖ ಸಿದ್ನೆಕೊಪ್ಪ, ಮಲ್ಲಿಕಾರ್ಜುನಪ್ಪ ಮೆಣಸಗಿ, ಸಾಹಿತಿ-ಶಿಕ್ಷಕಿ ಶ್ವೇತಾ ಕೊಟಗಿ, ಶಾಲಾ ಸಿಬ್ಬಂದಿಗಳಿದ್ದರು. ಶಿಕ್ಷಕ ಅತ್ತಾರ ವಂದಿಸಿದರು.

## ಬಸವದಳದಲ್ಲಿ ಉಪನ್ಯಾಸ ಇಂದು

■ ವಿಜಯಸಾಕ್ಷಿ ಸುದ್ದಿ, ಗದಗ



ಶಿವಾನಂದ ನಗರದ ಬಸವ ಸಮುದಾಯ ಭವನದಲ್ಲಿ ಫೆ. 22ರಂದು ಬೆಳಿಗ್ಗೆ 10ಕ್ಕೆ ನಡೆಯಲಿರುವ ಬಸವದಳದ 1686 ನೇ ಶರಣ ಸಂಗಮದಲ್ಲಿ ನಿರಂಜನಶರಣ ಹರ್ಡೇಕರ ಮಂಜಪ್ಪನವರ 140ನೇ ಜಯಂತಿ ಅಂಗವಾಗಿ ದತ್ತಿ ಉಪನ್ಯಾಸ ಕಾರ್ಯಕ್ರಮವನ್ನು ಏರ್ಪಡಿಸಲಾಗಿದೆ.

ಅಧ್ಯಕ್ಷತೆಯನ್ನು ಶರಣ ಎಸ್. ಎನ್. ಹಕಾರಿ ವಹಿಸುವರು. ಉಪನ್ಯಾಸಕರಾಗಿ ಶರಣ ತೋಟಪ್ಪ ಬಿ.ಕರದಾನಿ ಆಗಮಿಸುವರು. ಅತಿಥಿಗಳಾಗಿ ಶರಣ ಕೆ.ಎ. ಬಳಿಗೇರ ಆಗಮಿಸುವರು. ದತ್ತಿ ದಾನಿಗಳಾದ ಶರಣ ಎಂ.ಬಿ. ಲಿಂಗಧಾಳ ಉಪಸ್ಥಿತರಿರುವರು.

ಬಸವದಳದ ಸದಸ್ಯರು, ತಾಲೂಕಾ ಶರಣ ಸಾಹಿತ್ಯ ಪರಿಷತ್ತು, ತಾಲೂಕಾ ಕದಳಿ ಮಹಿಳಾ ವೇದಿಕೆ ಸದಸ್ಯರು ಹಾಗೂ ಆಸಕ್ತರು ಭಾಗವಹಿಸಬೇಕೆಂದು ಸಂಘಟಕರ ಪರವಾಗಿ ಪ್ರಕಾಶ ಅಸುಂಡಿಯವರು ವಿನಂತಿಸಿದ್ದಾರೆ.



ಗದಗ ತಾಲೂಕಿನ ಹೊಂಬಳ ವಲಯದ ಹುಯಿಲಗೋಳ ಕಾರ್ಯಕ್ಷೇತ್ರದಲ್ಲಿ ಮಾಶಾಸನ ಪಡೆಯುತ್ತಿದ್ದ ಹುಸೇನಮ್ಮ ಅವರಿಗೆ ಧರ್ಮಸ್ಥಳ ಗ್ರಾಮಾಭಿವೃದ್ಧಿ ಯೋಜನೆ ವತಿಯಿಂದ ನಿರ್ಮಿಸಿದ ವಾತ್ಸಲ್ಯ ಮನೆಯನ್ನು ಶನಿವಾರ ಜಿಲ್ಲಾ ನಿರ್ದೇಶಕರಾದ ಕೇಶವ ದೇವಾಂಗ ಅವರು ಉದ್ಘಾಟಿಸಿದರು. ಈ ಸಂದರ್ಭದಲ್ಲಿ ತಾಲೂಕಾ ಯೋಜನಾಧಿಕಾರಿ ಉಮಾ, ಕೊಪ್ಪಳ ಪ್ರಾದೇಶಿಕ ವಿಭಾಗದ ಜ್ಞಾನವಿಕಾಸ ಯೋಜನಾಧಿಕಾರಿ ಸುಧಾ, ಗ್ರಾ.ಪಂ ಸದಸ್ಯರು, ಊರಿನ ಗಣ್ಯರು ಮತ್ತು ನವಜೀವನ ಸಮಿತಿಯ ಸದಸ್ಯರು, ವಲಯದ ಮೇಲ್ವಿಚಾರಕರು, ಜ್ಞಾನವಿಕಾಸ ಸಮನ್ವಯ ಅಧಿಕಾರಿ, ಸೇವಾ ಪ್ರತಿನಿಧಿಗಳು ಉಪಸ್ಥಿತರಿದ್ದರು.

## ಪುಲಿಗೆರೆ ಉತ್ಸವದಲ್ಲಿ ಸಾಂಸ್ಕೃತಿಕ ವೈಭವ

■ ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ



ಪಟ್ಟಣದ ಸೋಮೇಶ್ವರ ದೇವಸ್ಥಾನದಲ್ಲಿ ಇನ್ಫೋಸಿಸ್ ಪ್ರತಿಷ್ಠಾನದ ಆಶ್ರಯದಲ್ಲಿ ಭಾರತೀಯ ವಿದ್ಯಾಭವನದಿಂದ ನಡೆಯುತ್ತಿರುವ ಪುಲಿಗೆರೆ ಉತ್ಸವದ ಮೊದಲ ದಿನ ಸಂಜೆ ಕಾರ್ಯಕ್ರಮದಲ್ಲಿ ಸಿದ್ದಾಪುರದ ಕೊಳಗಿ ಕೇಶವ ಹೆಗಡೆ ತಂಡದವರು ಸಾದರಪಡಿಸಿದ ಯಕ್ಷಗಾನ ನೃತ್ಯ ವೈಭವ ನೋಡುಗರ ಮೈನವಿರೇಳಿಸಿತು.

ಕಲಾವಿದರು ಕೃಷ್ಣಾರ್ಜುನರ ಕಾಳಗದ ಪ್ರಸಂಗ ಆಯ್ದುಕೊಂಡು ಪ್ರಸ್ತುತಪಡಿಸಿದ ಯಕ್ಷಗಾನ ಅತ್ಯಂತ ಮನಮೋಹಕವಾಗಿತ್ತು. ಗಯಗಂಧರ್ವನು ಯಜ್ಞವನ್ನು ಅಪವಿತ್ರಗೊಳಿಸಿದ ಹಿನ್ನೆಲೆಯಲ್ಲಿ ಕುಪಿತನಾದ ಶ್ರೀಕೃಷ್ಣ ಅವನನ್ನು ಎಂಟು ದಿನಗಳಲ್ಲಿ ಸಂಹರಿಸುವುದಾಗಿ ಶಪಥ ಮಾಡುತ್ತಾನೆ. ಇದನ್ನರಿತ ಗಯಗಂಧರ್ವ ಭಯಪಟ್ಟು ನನ್ನನ್ನು ಕಾಪಾಡು ಎಂದು ಅರ್ಜುನನಲ್ಲಿ ಮೊರೆ ಇಡುತ್ತಾನೆ. ಇದು ಕೃಷ್ಣಾರ್ಜುನರ ಕಾಳಗಕ್ಕೆ ಕಾರಣವಾಗಿರುತ್ತದೆ. ಈರ್ವರು ಕಲಾವಿದರು ಸನ್ನಿವೇಶ, ಸಂಗೀತಕ್ಕೆ ತಕ್ಕಂತೆ ನೃತ್ಯ ಮಾಡಿ ಎಲ್ಲರ ಮನ ಸೆಳೆದರು.

ಬಳಿಕ ಶಿಗ್ಗಾವಿಯ ಬಸವೇಶ್ವರ ನೃತ್ಯ ಶಾಲೆಯ ಶರಣ ಶೇಖಪ್ಪ ಬಡ್ಡಿ ಮತ್ತು ತಂಡದವರು ಪ್ರದರ್ಶಿಸಿದ ಭರತ ನಾಟ್ಯ ಪ್ರದರ್ಶನ ನಾಟ್ಯ ಲೋಕವನ್ನೇ ಸೃಷ್ಟಿಸಿತ್ತು.

ಯುವ ಕಲಾವಿದ ಶರಣ ಈವರೆಗೆ 500 ವೇದಿಕೆಗಳಲ್ಲಿ ತಮ್ಮ ಭರತ ನಾಟ್ಯ ಪ್ರದರ್ಶಿಸಿ ಕಲಾರಸಿಕರ ಮೆಚ್ಚುಗೆ ಗಳಿಸಿದ್ದಾರೆ. ಆರಂಭದಲ್ಲಿ ಸಾದರಪಡಿಸಿದ ಸ್ವಾಗತ ನೃತ್ಯ, ಸುಂದರವಾಗಿ ಮೂಡಿ ಬಂದಿತು. ನಂತರ ಗಣಪನ ಪೂಜಾ ನೃತ್ಯ ವೈಭವ ಮತ್ತು ಸಭಿಕರಿಗೆ ಹೂಗಳ ಸಮರ್ಪಣೆ ನೃತ್ಯವಂತೂ ಅದ್ಭುತವಾಗಿ ಮೂಡಿ ಬಂದಿತು.

ನಂತರ ಸ್ಥಳೀಯ ಮೊರಾರ್ಜಿ ದೇಸಾಯಿ ವಸತಿ ಶಾಲೆಯ ಸಂಗೀತ ಶಿಕ್ಷಕ ಡಾ. ಅರ್ಜುನ ವಠಾರ ಅವರು ಹಿಂದೂಸ್ತಾನಿ ಸಂಗೀತ ಪ್ರಸ್ತುತಪಡಿಸಿದರು.

ಅವರು ಬಳಿಕ ದಾಸರ ಪದಗಳನ್ನು ಹಾಡಿ ಸಂಗೀತ ಪ್ರೇಮಿಗಳ ಮನಸೂರೆಗೊಂಡರು.

## ಮಕ್ಕಳನ್ನು ತಪ್ಪದೇ ಶಾಲೆಗೆ ಕಳಿಸಿ



■ ವಿಜಯಸಾಕ್ಷಿ ಸುದ್ದಿ, ಮುಳಗುಂದ

ಹೆಣ್ಣು-ಗಂಡು ಎಂದು ಭೇದ ಮಾಡದೇ ಶಿಕ್ಷಣ ನೀಡಬೇಕು ಎಂದು ಗದಗ ತಾಲೂಕು ಶಿಕ್ಷಕರ ಸಂಘದ ಅಧ್ಯಕ್ಷ ಎಸ್.ಆರ್. ಬಂಡಿ ಹೇಳಿದರು.

ಅವರು ಪಟ್ಟಣದ ಸರಕಾರಿ ಮಾದರಿ ಹೆಣ್ಣುಮಕ್ಕಳ ಶಾಲೆಯ ವಾರ್ಷಿಕ ಸ್ನೇಹ ಸಮ್ಮೇಳನ ಕಾರ್ಯಕ್ರಮದಲ್ಲಿ ಮಾತನಾಡಿ, ಇಂದು ಆಧುನಿಕ ತಂತ್ರಜ್ಞಾನದ ಯುಗದಲ್ಲಿ ಹೆಣ್ಣು-ಗಂಡು ಎಂಬ ಭೇದ ಮಾಡದೇ ಶಿಕ್ಷಣ ಕೊಡಿಸುವುದು ಪ್ರತಿಯೊಬ್ಬರ ಜವಾಬ್ದಾರಿಯಾಗಿದೆ. ಸರಕಾರಿ ಶಾಲೆಗಳಲ್ಲಿ ಸಾಕಷ್ಟು ಸೌಲಭ್ಯಗಳಿದ್ದು, ಮಕ್ಕಳ ಕಲಿಕೆಗೆ ಉತ್ತಮ ವಾತಾವರಣ ಜೊತೆಯಲ್ಲಿ ಕಲಿಕೆಗೆ ಪೂರಕ ವಾತಾವರಣ ಹೊಂದಿರುವುದರಿಂದ ಪಾಲಕರು ತಪ್ಪದೇ ಶಾಲೆಗೆ ಕಳುಹಿಸಬೇಕು ಎಂದರು.

ರಾಜ್ಯ ಮಟ್ಟದ ಕೃಷಿ ಪಂಡಿತ ಪ್ರಶಸ್ತಿ ವಿಜೇತೆ ಮಂಗಳಾ ನೀಲಗುಂದ ಮಾತನಾಡಿ, ಸಾಧನೆಗೆ ಬಡತನ, ಅಂಗವಿಕಲತೆ ಯಾವುದೂ ಅಡ್ಡಿಯಾಗದು. ಸಾಧನೆ ಮಾಡುವ ಗುರಿ, ಛಲ ನಮ್ಮಲ್ಲಿರಬೇಕು. ಪರಿಸರ ಹಾಗೂ ಆರೋಗ್ಯದ ಕಾಳಜಿ ಪ್ರತಿಯೊಬ್ಬ ಪಾಲಕರೂ ಮಾಡಬೇಕು ಎಂದರು.

ಅಧ್ಯಕ್ಷತೆಯನ್ನು ಎಸ್‌ಡಿಎಂಸಿ ಅಧ್ಯಕ್ಷ ಮಾಹಾಂತೇಶ ಕಣವಿ ವಹಿಸಿದ್ದರು. ಗೌರಮ್ಮಾ ಬಡ್ನಿ ಕಾರ್ಯಕ್ರಮ ಉದ್ಘಾಟಿಸಿದರು. ಪ್ರಧಾನ ಗುರು ಪಿ.ಎಸ್. ಮರಿದೇವರಮಠ, ವೈಜಯಂತಿ ವಂಟಕರ, ಭರತ ಕುರ್ಣಿ, ಪಿ.ಬಿ. ಕೆಂಚನಗೌಡರ, ನಿವೃತ್ತ ಶಿಕ್ಷಕ ಮಲ್ಲಪ್ಪ ಹೆರಕಲ್, ಶೋಭಾ ಪಾಟೀಲ, ಸುಮನ ಚವಡಿ ಹಾಗೂ ಎಸ್‌ಡಿಎಂಸಿ ಸದಸ್ಯರು ಇದ್ದರು.

## ಪೂರ್ವಭಾವಿ ಸಭೆ ಇಂದು

■ ವಿಜಯಸಾಕ್ಷಿ ಸುದ್ದಿ, ಗದಗ

ಗದುಗಿನ ನಾಲ್ವಾಡ ಗಲ್ಲಿಯ ಶ್ರೀ ಕಾಮರತಿ ಉತ್ಸವ ಸಮಿತಿಯ 101ನೇ ವರ್ಷದ ಕಾಮರತಿ ಉತ್ಸವವನ್ನು ಸಂಭ್ರಮದಿಂದ ಆಚರಿಸಲು ಫೆ. 22ರಂದು ಸಂಜೆ 5 ಗಂಟೆಗೆ ನಾಲ್ವಾಡ ಗಲ್ಲಿಯ ಅಂಗನವಾಡಿ ಕೇಂದ್ರದಲ್ಲಿ ಪೂರ್ವಭಾವಿ ಸಭೆಯನ್ನು ಕರೆದಿದೆ.

ಓಣಿಯ ಹಿರಿಯರು, ಉತ್ಸವ ಸಮಿತಿಯ ಯುವಕರು ಸಭೆಗೆ ಆಗಮಿಸಿ ಸಲಹೆ ಸೂಚನೆ ನೀಡಬೇಕೆಂದು ಸಂಘಟಕರ ಪರವಾಗಿ ಶಿವಯೋಗಿ ಟೆಂಗಿನಕಾಯಿ ವಿನಂತಿಸಿದ್ದಾರೆ.

## ದರಪಟ್ಟಿ ಆಹ್ವಾನ

■ ವಿಜಯಸಾಕ್ಷಿ ಸುದ್ದಿ, ಗದಗ

2025-26ನೇ ಸಾಲಿನ ಲಿಂಕ್ ಡಾಕ್ಯೂಮೆಂಟ್ ಸಾಕ್ಷರತಾ ಕಾರ್ಯಕ್ರಮದ ಅನುಷ್ಠಾನದ ಅಂಗವಾಗಿ ಪ್ರಮಾಣ ಪತ್ರ ಮುದ್ರಣ, ಪರೀಕ್ಷಾ ಸಾಮಗ್ರಿ ಪೂರೈಕೆ ಹಾಗೂ ಗೌಪ್ಯ ಸಾಮಗ್ರಿ ಖರೀದಿ ಸಂಬಂಧ ಕನಿಷ್ಠ ಮತ್ತು ಯೋಗ್ಯ ದರಪಟ್ಟಿಗಳನ್ನು ಆಹ್ವಾನಿಸಲಾಗಿದೆ.

ಆಸಕ್ತರು ತಮ್ಮ ದರಪಟ್ಟಿಯನ್ನು ಮುಚ್ಚಿದ ಲಕೋಟೆಯಲ್ಲಿ ಜಿಲ್ಲಾ ಶಿಕ್ಷಣ ಮತ್ತು ತರಬೇತಿ ಸಂಸ್ಥೆ (DIET), ಕಳಸಾಪುರ ರೋಡ್, ಗದಗ ಕಚೇರಿಗೆ ಫೆಬ್ರವರಿ 27ರಂದು ಮಧ್ಯಾಹ್ನ 3.00 ಗಂಟೆಯೊಳಗೆ ಸಲ್ಲಿಸಬೇಕು.

ಹೆಚ್ಚಿನ ಮಾಹಿತಿಗಾಗಿ ಕಾರ್ಯಕ್ರಮ ನಿರ್ದೇಶಕರು ಹಾಗೂ ಪ್ರಭಾರಿ ಪ್ರಾಚಾರ್ಯರಾದ ಜಿ. ಎಂ. ಮುಂದಿನಮನಿ, District Institute of Education and Training, Gadag ಇವರನ್ನು ಮೊಬೈಲ್ ಸಂಖ್ಯೆ: 7619277145 ಮೂಲಕ ಸಂಪರ್ಕಿಸಬಹುದು.

## ಇನ್ಫೋಸಿಸ್ ಪ್ರತಿಷ್ಠಾನ ಶ್ರೇಷ್ಠ ಕಾರ್ಯ ಮಾಡುತ್ತಿದೆ

▶▶ ಮೊದಲನೇ ಪುಟದಿಂದ

ದಿನಗಳಲ್ಲಿ ಇನ್ನೂ ದೊಡ್ಡ ಪ್ರಮಾಣದಲ್ಲಿ ನಡೆಯುವಂತಾಗಲಿ ಎಂದು ಆಶಿಸಿದರು.

ಈ ವೇಳೆ ಇನ್ಫೋಸಿಸ್ ಫೌಂಡೇಶನ್‌ನ ಕಾರ್ಯಕ್ರಮ ವ್ಯವಸ್ಥಾಪಕ ಮಹೇಶಕುಮಾರ, ನಿರ್ದೇಶಕಿ ಕ್ಯಾ. ಶಾಂತಿ, ಇನ್ಫೋಸಿಸ್ ಅಧಿಕಾರಿಗಳಾದ ಮಹೇಶಕುಮಾರ, ದೀಪಾಲಿ, ರವಿಶಂಕರ, ಕೃಷ್ಣಮೂರ್ತಿ, ಪ್ರಹ್ಲಾದ್, ಸತೀಶ, ದೇವಿಕಾ, ಸಂಗೀತಾ, ಸವಿತಾ ಮತ್ತು ಭಾರತೀಯ ವಿದ್ಯಾಭವನದ ಜಂಟಿ ನಿರ್ದೇಶಕಿ ನಾಗಲಕ್ಷ್ಮಿ ಕೆ.ರಾವ್ ಮತ್ತು ಶ್ರೀ ಸೋಮೇಶ್ವರ ಭಕ್ತರ ಸೇವಾ ಟ್ರಸ್ಟ್ ಕಮಿಟಿ ಅಧ್ಯಕ್ಷ ಗುರುರಾಜ ಪಾಟೀಲ ಕುಲಕರ್ಣಿ ಮುಂತಾದವರಿದ್ದರು.

ಇದೇ ಸಂದರ್ಭದಲ್ಲಿ ಇನ್ಫೋಸಿಸ್ ಪ್ರತಿಷ್ಠಾನದ ಸಿಎಸ್‌ಆರ್ ವಿಭಾಗದ ವ್ಯವಸ್ಥಾಪಕರಾದ ಪ್ರಶಾಂತ ಹೆಗಡೆ ಮತ್ತಿತರ ಅಧಿಕಾರಿಗಳನ್ನು ಭಾರತೀಯ ವಿದ್ಯಭವನ ಹಾಗೂ ಶ್ರೀ ಸೋಮೇಶ್ವರ ಭಕ್ತರ ಸೇವಾ ಟ್ರಸ್ಟ್ ಕಮಿಟಿ ವತಿಯಿಂದ ಗೌರವಿಸಲಾಯಿತು.

## ಕಣ್ಣಿನ ಪೊರೆ ಶಸ್ತ್ರಚಿಕಿತ್ಸೆಗಾಗಿ ಎನ್‌ಜಿಓಗಳ ಅರ್ಜಿ ಆಹ್ವಾನ

■ ವಿಜಯಸಾಕ್ಷಿ ಸುದ್ದಿ, ಗದಗ

ಜಿಲ್ಲಾ ಅಂಧತ್ವ ನಿಯಂತ್ರಣ ಕಾರ್ಯಕ್ರಮದಡಿಯಲ್ಲಿ ಗದಗ ಜಿಲ್ಲೆಯಲ್ಲಿ ಕಣ್ಣಿನ ಪೊರೆ ಶಿಬಿರಗಳನ್ನು ಆಯೋಜಿಸಿ ಉಚಿತ ಶಸ್ತ್ರಚಿಕಿತ್ಸೆಗಳನ್ನು ಕೈಗೊಳ್ಳಲು ಅರ್ಹ ಹಾಗೂ ಅನುಭವ ಹೊಂದಿದ ಸರ್ಕಾರೇತರ ಸ್ವಯಂಸೇವಾ ಸಂಸ್ಥೆಗಳಿಂದ ಅರ್ಜಿಗಳನ್ನು ಆಹ್ವಾನಿಸಲಾಗಿದೆ.

ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸೊಸೈಟಿ ಹಾಗೂ ಜಿಲ್ಲಾ ಅಂಧತ್ವ ನಿಯಂತ್ರಣ ಕಾರ್ಯಕ್ರಮದ ವತಿಯಿಂದ ಕೆ.ಟಿ.ಟಿ.ಪಿ ನಿಯಮಾನುಸಾರ ಗದಗ ಜಿಲ್ಲೆಯ ವ್ಯಾಪ್ತಿಯಲ್ಲಿ ಕಣ್ಣಿನ ಪೊರೆ ಶಸ್ತ್ರಚಿಕಿತ್ಸೆಗಳನ್ನು ನಡೆಸಲು ಸರ್ಕಾರೇತರ ಎನ್‌ಜಿಓಗಳನ್ನು ಆಯ್ಕೆ ಮಾಡಲಾಗುತ್ತದೆ.

ಆಸಕ್ತ ಮತ್ತು ಅರ್ಹ ಸಂಸ್ಥೆಗಳು ನಿಗದಿತ ಮಾನದಂಡಗಳ ಪ್ರಕಾರ ಅರ್ಜಿ ಸಲ್ಲಿಸಬಹುದು. ಹೆಚ್ಚಿನ ಮಾಹಿತಿಗಾಗಿ ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸೊಸೈಟಿ, ರೂಂ ನಂ. 101, ಜಿಲ್ಲಾ ಅಂಧತ್ವ ನಿಯಂತ್ರಣ ವಿಭಾಗ, ಗದಗ ಕಚೇರಿಯನ್ನು ಸಂಪರ್ಕಿಸಲು ತಿಳಿಸಲಾಗಿದೆ.

ತಮ್ಮದೇ ಒಡೆತನದ 'ಬಾಲಾಜಿ' ಆಸ್ಪತ್ರೆಯಲ್ಲಿ ಲೋಕಾಯುಕ್ತ ಬಲೆಗೆ ಬಿದ್ದ ಶಾಸಕ ಡಾ. ಚಂದ್ರು ಲಮಾಣಿ

# ಶಾಸಕ ಡಾ. ಚಂದ್ರು ಲಮಾಣಿಗೆ 'ಲಂಚದ ಬಲೆ'



ಶಾಸಕ ಡಾ. ಚಂದ್ರು ಲಮಾಣಿ ಅವರನ್ನು ಅವರದ್ದೇ ಒಡೆತನದ ಬಾಲಾಜಿ ಆಸ್ಪತ್ರೆಯಲ್ಲಿ ವಶಕ್ಕೆ ಪಡೆದು ವಿಚಾರಣೆ ನಡೆಸುತ್ತಿದ್ದಾರೆ ಎಂಬ ಸುದ್ದಿ ಹರಡುತ್ತಿದ್ದಂತೆಯೇ ದೌಡಾಯಿಸಿದ ಬಿಜೆಪಿ ಕಾರ್ಯಕರ್ತರು ಮತ್ತು ಅವರ ಅಭಿಮಾನಿಗಳು ಕಾಂಗ್ರೆಸ್ ಪಕ್ಷ ಮತ್ತು ಕೆಲ ಪ್ರಮುಖ ಕಾಂಗ್ರೆಸ್ ನಾಯಕರ ವಿರುದ್ಧ ಆಕ್ರೋಶ ವ್ಯಕ್ತಪಡಿಸಿ ಪ್ರತಿಭಟನೆ ನಡೆಸಿದರು. ಮಧ್ಯಾಹ್ನ 2 ಗಂಟೆಯಿಂದ ಸಂಜೆ 8 ಗಂಟೆಯವರೆಗೂ ಆಸ್ಪತ್ರೆಯ ಮುಂದೆ ನೂರಾರು ಕಾರ್ಯಕರ್ತರು ಜಮಾವಣೆಗೊಂಡಿದ್ದರು. ಕೆಲ ಕಾರ್ಯಕರ್ತರು ರಸ್ತೆ ತಡೆ ನಡೆಸುವ ಪ್ರಯತ್ನ ಮಾಡಿದರು. ಈ ವೇಳೆ ಪೊಲೀಸರು ಮತ್ತು ಕಾರ್ಯಕರ್ತರ ನಡುವೆ ವಾಗ್ವಾದ ನಡೆದು ಕೆಲ ಹೊತ್ತು ಪ್ರಕ್ಷುಬ್ಧ ವಾತಾವರಣ ನಿರ್ಮಾಣಗೊಂಡಿತ್ತು.



**■ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ**

ಸಣ್ಣ ನೀರಾವರಿ ಇಲಾಖೆಯ ಕಾಮಗಾರಿಗೆ ಸಂಬಂಧಿಸಿ ಶನಿವಾರ ಗುತ್ತಿಗೆದಾರರಿಂದ ಲಂಚದ ಹಣ ಪಡೆಯುತ್ತಿದ್ದ ವೇಳೆ ದಾಳಿ ಮಾಡಿದ ಲೋಕಾಯುಕ್ತ ಪೊಲೀಸರು ಶಿರಹಟ್ಟಿ ಮತಕ್ಷೇತ್ರದ ಶಾಸಕ ಡಾ. ಚಂದ್ರು ಲಮಾಣಿ, ಪಿಎ ಮಂಜುನಾಥ ವಾಲ್ಮೀಕಿ ಮತ್ತು ಸಂಬಂಧಿ ಗುರು ಲಮಾಣಿ ಅವರನ್ನು ವಶಕ್ಕೆ ಪಡೆದು ವಿಚಾರಣೆ ನಡೆಸಿದ ಘಟನೆ ಶನಿವಾರ ಜರುಗಿದೆ.

ಸಣ್ಣ ನೀರಾವರಿ ಮತ್ತು ಅಂತರ್ಜಲ ಅಭಿವೃದ್ಧಿ ಇಲಾಖೆಯಿಂದ ಲಕ್ಷ್ಮೇಶ್ವರ ತಾಲೂಕಿನ ಸಂಕದಾಳ ಗ್ರಾಮದ ಹಳ್ಳಕ್ಕೆ 2 ಕಡೆ ತಡೆಗೋಡೆ ನಿರ್ಮಿಸುವ ಕಾಮಗಾರಿಗೆ ಗುತ್ತಿಗೆದಾರ ಟೆಂಡರ್ ಪಡೆದಿರುತ್ತಾರೆ. ಕಳೆದ ಡಿ. 5ಕ್ಕೆ ಕಾಮಗಾರಿಗೆ ಭೂಮಿಪೂಜೆ ಮಾಡಲಾಗಿತ್ತು. ಈ ಕಾಮಗಾರಿ ಪ್ರಾರಂಭಿಸಲು ಶಾಸಕರು ಹಾಗೂ ಸಹಾಯಕರನ್ನು ಸಂಪರ್ಕಿಸಿದಾಗ ನಮಗೆ ಶೆ. 12 ಕಮೀಷನ್ ಹಣ ಅಂದರೆ ಟೆ-ಂಡರ್ ಮೊತ್ತಕ್ಕೆ 11 ಲಕ್ಷ ರೂ ಕೊಟ್ಟು ಕಾಮಗಾರಿ ಪ್ರಾರಂಭಿಸಿ. ಇಲ್ಲದಿದ್ದರೆ ಈ ಟೆಂಡರ್ ಕ್ಯಾನ್ಸಲ್ ಮಾಡಿಸುತ್ತೇವೆ. ಇಲ್ಲದಿದ್ದರೆ ರೌಡಿಗಳನ್ನು ಕಳುಹಿಸಿ ಬುದ್ಧಿ ಕಲಿಸುತ್ತೇವೆ ಎಂದು ಧಮಕಿ ಹಾಕಿದ್ದರು ಎಂದು ಲೋಕಾಯುಕ್ತಕ್ಕೆ ದೂರು ಸಲ್ಲಿಸಿದ ಗುತ್ತಿಗೆದಾರರ ವಿಜಯ ಪೂಜಾರ ಶನಿವಾರ 5 ಲಕ್ಷ ರೂ ಲಂಚವಾಗಿ ಕಮೀಷನ್ ರೂಪದಲ್ಲಿ ಕೊಡಲು ಬಂದಾಗ ಲೋಕಾಯುಕ್ತ ದಾಳಿ ನಡೆದಿದೆ. ಈ ವೇಳೆ ಮೂವರು ಆಪಾದಿತರು ಲಂಚದ ಹಣವಾಗಿ 5 ಲಕ್ಷ ರೂಗಳನ್ನು ಸ್ವೀಕರಿಸುತ್ತಿದ್ದಾಗ ರೆಡ್ ಹ್ಯಾಂಡ್ ಹಿಡಿದು ದಸ್ತಗಿರಿ ಮಾಡಿದ್ದಾರೆ. ಈ ವೇಳೆ ಬಿಜೆಪಿ ಕಾರ್ಯಕರ್ತರಾದ ಶಂಕರ ಮರಾಠೆ, ಬಸವರಾಜ ಚಕ್ರಸಾಲಿ, ನವೀನ ಹಿರೇಮಠ, ಗಂಗಾಧರ ಮೆಣಸಿನಕಾಯಿ, ನಾಗರಾಜ ಲಕ್ಕುಂಡಿ, ಮಲ್ಲಿಕಾರ್ಜುನ ಹಣಜಿ, ಕುಮಾರಸ್ವಾಮಿ ಹಿರೇಮಠ, ತಾವರೆಪ್ಪ ಲಮಾಣಿ ಸೇರಿ ಅನೇಕ ಕಾರ್ಯಕರ್ತರು ಶಾಸಕರ ಮೇಲಿನ ಲಂಚದ ಆರೋಪ ಕಾಂಗ್ರೆಸ್ ಪಕ್ಷದ ನಾಯಕರ ಷಡ್ಯಂತ್ರವಾಗಿದೆ. ವಿಧಾನಸಭೆ ಅಧಿವೇಶನದಲ್ಲಿ ಮತ್ತು ಇತ್ತೀಚೆಗೆ ಬೆಳ್ಳಟ್ಟಿ ಕಾರ್ಯಕ್ರಮದಲ್ಲಿ ಕಾಂಗ್ರೆಸ್ ಸರಕಾರದ ವೈಫಲ್ಯಗಳನ್ನು ಎತ್ತಿ ತೋರಿಸಿದ್ದರು. ಗಟ್ಟಿಧ್ವನಿಯ ಶಾಸಕರ ಏಳಿಗೆ ಸಹಿಸದ ಕೆಲ ಕಾಂಗ್ರೆಸ್ ನಾಯಕರು, ವಿರೋಧಿಗಳು ಮತ್ತು ಓರ್ವ ಸ್ವಾಮೀಜಿ ಸೇರಿ ಮಾಡಿದ ಷಡ್ಯಂತ್ರವಾಗಿದೆ. ಲಂಚದ ಹಣ ಪಡೆದಿರುವುದು ಸುಳ್ಳು ಆರೋಪ. ಗುತ್ತಿಗೆದಾರ ಕಾಂಗ್ರೆಸ್ ಏಜೆಂಟ್ ಆಗಿದ್ದು, ಇದು ನಮ್ಮ ಶಾಸಕರ ಹೆಸರಿಗೆ ಮಸಿ ಬಳಿಯುವ ಪ್ರಯತ್ನವಾಗಿದೆ. ಈ ಘಟನೆ ಕಾರ್ಯಕರ್ತರಿಗೆ ಸಾಕಷ್ಟು ನೋವು ತರಿಸಿದ್ದು, ಇದಕ್ಕೆ ತಕ್ಕ ಉತ್ತರ ನೀಡುತ್ತೇವೆ ಎಂದು ಆಕ್ರೋಶ ವ್ಯಕ್ತಪಡಿಸಿದರು.

ಗದಗ ತಾಲೂಕಿನ ಚಿಂಚಲಿ ಗ್ರಾಮದ ಗುತ್ತಿಗೆದಾರ ವಿಜಯರಾಜ ಪೂಜಾರ ಎಂಬುವರು ಗದಗ ಲೋಕಾಯುಕ್ತ ಠಾಣೆಗೆ ನೀಡಿದ ದೂರಿನನ್ವಯ ಲೋಕಾಯುಕ್ತ ಎಡಿಜಿಪಿ ಮನೀಷ ಕರ್ಬಿಕರ್, ಐಜಿಪಿ ಸುಬ್ರಹ್ಮಣೇಶ್ವರ ರಾವ್, ಧಾರವಾಡ ಲೋಕಾಯುಕ್ತ ಎಸ್‌ಪಿ ಎಸ್.ಟಿ. ಸಿದ್ದಲಿಂಗಪ್ಪ ಅವರ ಮಾರ್ಗದರ್ಶನದಲ್ಲಿ ಗದಗ ಮತ್ತು ಧಾರವಾಡ ಲೋಕಾಯುಕ್ತ ಠಾಣೆಗಳ ಅಧಿಕಾರಿ ಮತ್ತು ಸಿಬ್ಬಂದಿಗಳು ಈ ದಾಳಿಯಲ್ಲಿ ಭಾಗವಹಿಸಿ ತನಿಖೆ ಕೈಗೊಂಡರು. ಘಟನೆಯ ಹಿನ್ನೆಲೆಯಲ್ಲಿ ಶಾಸಕರು ಮತ್ತು ಸಹಾಯಕರನ್ನು ಗದಗ ಜಿಲ್ಲಾ ವಿಶೇಷ ನ್ಯಾಯಾಲಯಕ್ಕೆ ಹಾಜರು ಮಾಡುವ ಸಾಧ್ಯತೆಯ ಬಗ್ಗೆ ಕೇಳಿ ಬಂದಿತು.

## ಟ್ರ್ಯಾಕ್ಟರ್‌ನಲ್ಲಿ ಟೇಪ್ ಹಾಕಿದರೆ ಎಚ್ಚರ!




**■ವಿಜಯಸಾಕ್ಷಿ ಸುದ್ದಿ, ನರೇಗಲ್ಲ**

ಇನ್ನು ಮುಂದೆ ನಿಮ್ಮ ಟ್ರ್ಯಾಕ್ಟರ್‌ಗಳಲ್ಲಿ ಟೇಪ್ ಹಾಕಿಕೊಂಡು ಜೋರಾಗಿ ಹಾಡುಗಳನ್ನು ಕೂಗಿಸುತ್ತ ಪಟ್ಟಣದಲ್ಲಿ, ಊರುಗಳಲ್ಲಿ, ಗ್ರಾಮಗಳಲ್ಲಿ ತಿರುಗಾಡುತ್ತಿದ್ದ-ರೆ ಈಗಲೇ ಎಚ್ಚೆತ್ತುಕೊಳ್ಳಿ. ಇನ್ನು ಮುಂದೆ ನರೇಗಲ್ಲ ಪೊಲೀಸರು ನಿಮ್ಮ ಟೇಪ್‌ಗಳನ್ನು ವಶಪಡಿಸಿಕೊಳ್ಳುತ್ತಾರೆ, ನಿಮಗೆ ದಂಡ ಹಾಕುತ್ತಾರೆ, ಇದಕ್ಕೂ ನೀವು ಬಗ್ಗದಿದ್ದರೆ ನಿಮ್ಮ ಗಾಡಿಯನ್ನೇ ಸೀಜ್ ಮಾಡುತ್ತಾರೆ.

ನರೇಗಲ್ಲ ಪಟ್ಟಣ ಮತ್ತು ಗ್ರಾಮಗಳಲ್ಲಿ ಟ್ರ್ಯಾಕ್ಟರ್ ಹಾಡಿನ ಹಾವಳಿ ಹೆಚ್ಚಾಗಿದೆ. ಹಿಂದೆ ಬರುವ ವಾಹನದವರು ಎಷ್ಟೇ ಹಾರ್ನ್ ಮಾಡಿದರೂ ಕೇಳಿಸದ ಟ್ರ್ಯಾಕ್ಟರ್ ಚಾಲಕರು ಹಾಗೇ ಸಾಗುತ್ತ ಅನೇಕ ಅನಾಹುತಗಳಿಗೆ ಮತ್ತು ಅಪಘಾತಗಳಿಗೆ ಕಾರಣರಾಗುತ್ತಿದ್ದಾರೆ. ಅದಕ್ಕಾಗಿ ಈ ಕಠಿಣ ಕ್ರಮವನ್ನು ತೆಗೆದುಕೊಳ್ಳಲೇಬೇಕಾಗಿದೆ ಎಂದು ಪಿಎಸ್‌ಐ ಐಶ್ವರ್ಯ ನಾಗರಾಳ ಸುದ್ದಿಗಾರರೊಂದಿಗೆ ಮಾತನಾಡುತ್ತ ತಿಳಿಸಿದರು.

ಸಾರ್ವಜನಿಕ ಸ್ಥಳಗಳಲ್ಲಿ ಈ ರೀತಿ ಜೋರಾಗಿ ಹಾಡುಗಳನ್ನು ಹಾಕಿಕೊಂಡು ಓಡಾಡುವುದರಿಂದ ಹೃದಯ ರೋಗಿಗಳಿಗೆ, ಚಿಕ್ಕ ಮಕ್ಕಳಿಗೆ, ಶಾಲಾ-ಕಾಲೇಜು ವಿದ್ಯಾರ್ಥಿಗಳಿಗೆ, ಸಾರ್ವಜನಿಕರಿಗೆ ಇನ್ನಿಲ್ಲದ ತೊಂದರೆಯಾಗುತ್ತಿರುವುದನ್ನು ಮನಗಂಡು ಈ ಕ್ರಮಕ್ಕೆ ಮುಂದಾಗಿದ್ದೇವೆ ಎಂದರು.

ಇದಕ್ಕೆ ಸಂಬಂಧಿಸಿಂತೆ ಕಳೆದ ಎರಡು ಮೂರು ದಿನಗಳಿಂದ ತಾವು ಮತ್ತು ತಮ್ಮ ಸಿಬ್ಬಂದಿಯವರು ಇಂತಹ ಟ್ರ್ಯಾಕ್ಟರ್ ಚಾಲಕರನ್ನು ಹಿಡಿದು ಜಾಗೃತಿ ಮೂಡಿಸುತ್ತಿದ್ದೇವೆ. ಇನ್ನು ಎರಡು ಮೂರು ದಿನದೊಳಗೆ ಎಲ್ಲ ಟ್ರ್ಯಾಕ್ಟರ್ ಚಾಲಕರು ಅಥವಾ ಮಾಲೀಕರು ತಮ್ಮ ಟೇಪ್‌ಗಳನ್ನು ಪಟ್ಟಣದೊಳಗೆ ಬಂದ್ ಮಾಡಿಕೊಳ್ಳದಿದ್ದರೆ ಅಂಥವರ ವಿರುದ್ಧ ಕಠಿಣ ಕ್ರಮ ಜರುಗಿಸಲಾಗುವುದೆಂದರು.

## ಶ್ರೀ ಸೋಮೇಶ್ವರನ ಪಲ್ಲಕ್ಕಿ ಉತ್ಸವ ಸಂಪನ್ನ



**■ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ**

ಇನ್ಫೋಸಿಸ್ ಪ್ರತಿಷ್ಠಾನದಿಂದ ನಡೆಯುತ್ತಿರುವ 9ನೇ ವರ್ಷದ ಪುಲಿಗೆರೆ ಉತ್ಸವದ ಅಂಗವಾಗಿ ಶನಿವಾರ ಪುಲಿಗೆರೆಯ ಆರಾಧ್ಯ ದೈವ ಶ್ರೀ ಸೋಮೇಶ್ವರನ ಉತ್ಸವ ಮೂರ್ತಿಯನ್ನಿರಿಸಿದ ಪಲ್ಲಕ್ಕಿ ಮೆರವಣಿಗೆ ಸಕಲ ವಾದ್ಯ ವೈಭವಗಳೊಂದಿಗೆ ಅದ್ದೂರಿಯಾಗಿ ನೆರವೇರಿತು. ಮೆರವಣಿಗೆಯಲ್ಲಿ ಕೊಣ್ಣೂರಿನ ರಾಯಣ್ಣ ಮಹಿಳಾ ಡೊಳ್ಳು ಮೇಳ, ನಂದಿಕೋಲು ಕುಣಿತ, ವಾದ್ಯಮೇಳಗಳು, ಪೂರ್ಣಕುಂಭ ಮೆರವಣಿಗೆ ರಂಗು ಹೆಚ್ಚಿಸಿದ್ದವು.

ದೇವಸ್ಥಾನದಿಂದ ಪ್ರಮುಖ ಬೀದಿಗಳ ಮೂಲಕ ಸಾಗಿದ ಮೆರವಣಿಗೆ ಮಾರ್ಗದಲ್ಲಿ ಜನತೆ ತಮ್ಮ ಮನೆಯ ಮುಂಭಾಗ ಸ್ವಚ್ಛಗೊಳಿಸಿ ರಂಗೋಲಿ ಹಾಕಿ ಶೃಂಗರಿಸುವ ಮೂಲಕ ಶ್ರೀ ಸೋಮೇಶ್ವರನಿಗೆ ಭಕ್ತಿಯಿಂದ ನಮಿಸಿದರು. ಅಲಂಕೃತ ಪಲ್ಲಕ್ಕಿಯಲ್ಲಿ ಶ್ರೀ ಸೋಮೇಶ್ವರನ ಮೂರ್ತಿಯನ್ನಿರಿಸಿ ಜಾಗಟೆ ಗಂಟೆಗಳ ನಾದಗಳೊಂದಿಗೆ ಪಲ್ಲಕ್ಕಿ ಮೆರವಣಿಗೆ ಪಟ್ಟಣದ ಮುಖ್ಯ ಬಜಾರ್ ಸೇರಿ ಪ್ರಮುಖ ಪ್ರದೇಶಗಳಲ್ಲಿ ಸಾಗಿ ದೇವಸ್ಥಾನದಲ್ಲಿ ಸಂಪನ್ನಗೊಂಡಿತು.

ಮೆರವಣಿಗೆಯಲ್ಲಿ ಶಾಸಕ ಡಾ. ಚಂದ್ರು ಲಮಾಣಿ, ಸೋಮೇಶ್ವರ ಭಕ್ತರ ಸೇವಾ ಟ್ರಸ್ಟ್ ಕಮಿಟಿ ಅಧ್ಯಕ್ಷ ಗುರುರಾಜ ಪಾಟೀಲ್ ಕುಲಕರ್ಣಿ, ಚಂಬಣ್ಣ ಬಾಳಿಕಾಯಿ, ಡಾ. ಪಿ.ಡಿ. ತೋಟದ, ಸುರೇಶ ರಾಚನಾಯಕ, ಎಸ್.ಪಿ. ಪಾಟೀಲ, ವಿರೂಪಾಕ್ಷಪ್ಪ ಆದಿ, ಈಶ್ವರ ಮೆಡ್ಲೇರಿ, ಡಾ. ಎಸ್.ಜಿ. ಹೂವಿನ, ಕಿರಣ ನವಲೆ, ಪ್ರಕಾಶ ಉಪನಾಳ, ಬಸವರಾಜ ಮೆಣಸಿನಕಾಯಿ, ಸಿದ್ದನಗೌಡ ಬಳ್ಳೊಳ್ಳಿ, ಮಯೂರಗೌಡ ಪಾಟೀಲ, ಐ.ಎಸ್. ಮಡಿವಾಳರ, ಶಿವಯೋಗಿ ಅಂಕಲಕೋಟಿ, ರಾಜಶೇಖರ ಶಿಗ್ಲಿಮಠ, ರುದ್ರಪ್ಪ ನರೆಗಲ್, ನಾರಾಯಣಪ್ಪ ಗಾರ್ಗಿ, ನಾರಾಯಣಸಾ ಪವಾರ, ಈರಣ್ಣ ಮುಳುಗುಂದ, ನಂದೀಶ ಬಂಡಿವಾಡ, ಜಿ.ಎಸ್. ಗುಡಗೇರಿ, ಗಂಗಾದರಯ್ಯ ಪುರಾಣಿಕಮಠ, ಸೋಮಶೇಖರ ಕೆರಿಮನಿ, ಎಸ್. ಎಫ್. ಕೊಡ್ಲಿ, ಮಾಲಾದೇವಿ ದಂದರಗಿ, ವಿದ್ಯಾ ಮಹಾಂತಶೆಟ್ಟರ, ಸುಜಾತಾ ಬಾಳಿಕಾಯಿ, ಲತಾ ತಟ್ಟಿ, ಇಂದುಮತಿ ಜಕ್ಕನಗೌಡ್ರ, ಅಶ್ವಿನಿ ಅಂಕಲಕೋಟಿ, ಶೈಲಾ ಆದಿ ಕಾವ್ಯ ದೇಸಾಯಿ ಮುಂತಾದವರಿದ್ದರು.

ಗದಗ ಜಿಲ್ಲಾ ವಾಣಿಜ್ಯೋದ್ಯಮ ಸಂಸ್ಥೆಯಲ್ಲಿ ಎಚ್.ಟಿ. ಗ್ರಾಹಕರ ಕುಂದು-ಕೊರತೆ ಸಭೆ

## ಅವಶ್ಯಕತೆಗೆ ಅನುಗುಣವಾಗಿ ವಿದ್ಯುತ್ ಬಳಕೆ ಮಾಡಿ



ಸಭೆಯ ಅಧ್ಯಕ್ಷತೆ ವಹಿಸಿದ ಸಂಸ್ಥೆಯ ಅಧ್ಯಕ್ಷ ಶರಣಬಸಪ್ಪ ಸಂಗಪ್ಪ ಗುಡಿಮನಿ ಮಾತನಾಡುತ್ತಾ, ಒಂದು ಉದ್ಯಮವನ್ನು ನಡೆಸಬೇಕಾದರೆ ಸಾಕಷ್ಟು ತೊಂದರೆಗಳನ್ನು ಎದುರಿಸಬೇಕಾಗುತ್ತದೆ. ಈ ನಿಟ್ಟಿನಲ್ಲಿ ಉದ್ದಿಮೆದಾರರಿಗೆ ಯಾವುದೇ ರೀತಿಯಿಂದ ಹೊರೆ ಮಾಡಬಾರದು.

ಸರ್ಕಾರದಿಂದ ಉದ್ಯಮಗಳಿಗೆ ರೂ. 4 ದರದಲ್ಲಿ ವಿದ್ಯುತ್ ಪೂರೈಕೆ ಮಾಡಿದರೆ ಹೆಚ್ಚಿನ ಅನುಕೂಲವಾಗುತ್ತದೆ. ಇನ್ನು ಉದ್ಯಮವು ತೊಂದರೆಗೆ ಒಳಗಾದ ಸಂದರ್ಭದಲ್ಲಿ ವಿದ್ಯುತ್ ಬಿಲ್‌ನ್ನು ನಿಗದಿತ ಸಮಯಕ್ಕಿಂತ ವಿಳಂಬವಾದಲ್ಲಿ ಬಡ್ಡಿರಹಿತವಾಗಿ ಬಿಲ್‌ನ್ನು ಆಕರಣೆ ಮಾಡಬೇಕೆಂದು ವಿನಂತಿಸಿದರು.

**■ವಿಜಯಸಾಕ್ಷಿ ಸುದ್ದಿ, ಗದಗ**

ಎಚ್.ಟಿ. ಗ್ರಾಹಕರು ತಮ್ಮ ಉದ್ಯಮಗಳಿಗೆ ಅವಶ್ಯಕತೆ ತಕ್ಕಂತೆ ವಿದ್ಯುತ್ ಬಳಕೆ ಮಾಡಿಕೊಳ್ಳಲು ಅವಕಾಶ ಇರುತ್ತದೆ. ಎಚ್.ಟಿ. ವಿದ್ಯುತ್ ಗ್ರಾಹಕರು ಸಿಜನಲ್ ಬೆಳೆಗಳ ಕೈಗಾರಿಕೆಗಳಿಗೆ ವರ್ಷದಲ್ಲಿ ಎರಡು ಬಾರಿ ಸಿಜ್‌ನಲ್ ವಿದ್ಯುತ್ ಬಳಕೆ ಕಡಿಮೆ ಮಾಡಿಕೊಳ್ಳಲು ಅವಕಾಶ ಇರುತ್ತದೆ.

ಇಲಾಖೆಯಿಂದ ಎಚ್.ಟಿ. ಗ್ರಾಹಕರಿಗೆ ಸರಿಯಾದ ಸಮಯಕ್ಕೆ ವಿದ್ಯುತ್ ಬಿಲ್ ನೀಡಲಾಗುತ್ತದೆ ಮತ್ತು ಸರಿಯಾದ ಸಮಯಕ್ಕೆ ವಿದ್ಯುತ್ ಬಿಲ್ ಪಾವತಿ ಮಾಡುವುದರಿಂದ ಯಾವುದೇ ದಂಡ ಇರುವುದಿಲ್ಲ ಎಂದು ಹುಬ್ಬಳ್ಳಿ ವಿದ್ಯುತ್ ಸರಬರಾಜು ಕಂಪನಿಯ ಕಾರ್ಯ ಮತ್ತು ಪಾಲನಾ ವಿಭಾಗದ ಗದಗ ಅಧೀಕ್ಷಕ ಅಭಿಯಂತರರಾದ ನಜ್ಮುನ್ನಿಸಾ ಕೆ. ಅಲ್ಲಾವಲ್ಲಿ ತಿಳಿಸಿದರು.

ಗದಗ ಜಿಲ್ಲಾ ವಾಣಿಜ್ಯೋದ್ಯಮ ಸಂಸ್ಥೆಯಿಂದ ಹಮ್ಮಿಕೊಂಡಿದ್ದ ಎಚ್.ಟಿ. ಗ್ರಾಹಕರ ಕುಂದು-ಕೊರತೆಗಳ ಸಭೆಯನ್ನು ಉದ್ಘಾಟಿಸಿ ಅವರು ಮಾತನಾಡಿದರು.

ಮುಖ್ಯ ಅತಿಥಿಗಳಾದ ಹೆಸ್ಕಾಂ ಕಾರ್ಯ ಮತ್ತು ಪಾಲನಾ ವಿಭಾಗದ ಕಾರ್ಯನಿರ್ವಾಹಕ ಅಭಿಯಂತರರಾದ ರಾಜೇಶ ಬಿ.ಕಲ್ಯಾಣಶೆಟ್ಟಿ ಮಾತನಾಡುತ್ತಾ, ಒಂದು ಉದ್ಯಮ ನಡೆಯಬೇಕಾದರೆ ವಿದ್ಯುತ್ ಅವಶ್ಯಕತೆ ಇರುತ್ತದೆ. 2003ರಲ್ಲಿ ಕೆ.ಇ.ಆರ್.ಸಿ.ಯವರು ಹೆಸ್ಕಾಂಗೆ ಲೈಸನ್ಸ್ ನೀಡಿದ್ದು, ನಾವು ಅವರ ಅದೇಶದ ಮೇಲೆ ವಿದ್ಯುತ್ ಸರಬರಾಜು ಮಾಡುತ್ತೇವೆ.

ದರವನ್ನು ಕೂಡಾ ಕೆ.ಇ.ಆರ್.ಸಿ.ಯವರು ನಿಗದಿ ಪಡಿಸುತ್ತಾರೆ. 150 ಎಚ್.ಪಿ. ಮೇಲೆ ಇದ್ದರೆ ಎಚ್.ಟಿ.ಗೆ ಹೋಗಬೇಕಾಗುತ್ತದೆ. ಪಡೆದ ವಿದ್ಯುತ್‌ನ್ನು ಸರಿಯಾಗಿ ಬಳಕೆ ಮಾಡಿಕೊಳ್ಳದೇ ಇದ್ದರೆ ಅದು ಉದ್ಯಮಿಗಳಿಗೆ ನಷ್ಟವಾಗುತ್ತದೆ ಎಂದು ತಿಳಿಸಿದರು.

ಹೆಸ್ಕಾಂ ಕಾರ್ಯ ಮತ್ತು ಪಾಲನೆ ವಿಭಾಗದ ಕಾ ೦ ು ್ ು ನಿ ವಾ ್ ಹ ' ಕ ಅಭಿಯಂತರರಾದ ವೀರೇಶ ಟಿ.ರಾಜೂರ್ ಮಾತನಾಡುತ್ತಾ, ಎಚ್.ಟಿ. ಗ್ರಾಹಕರು ತಮ್ಮ ಸಮಸ್ಯೆಗಳ ಬಗ್ಗೆ ಅಧಿಕಾರಿಗಳ ಗಮನಕ್ಕೆ ತಂದರೆ ಅವುಗಳನ್ನು ಪರಿಹರಿಸಲು ಸಾಧ್ಯವಾಗುತ್ತದೆ. ಸರ್ಕಾರವು ಉದ್ಯಮಗಳ ಬೆಳವಣಿಗೆಗೆ ಸಾಕಷ್ಟು ಅವಕಾಶಗಳನ್ನು ನೀಡಿದೆ. ಅವುಗಳನ್ನು ಸಮರ್ಪಕವಾಗಿ ಸದುಪಯೋಗಪಡಿಸಿಕೊಳ್ಳಬೇಕೆಂದು ತಿಳಿಸಿದರು.

ಸಂಸ್ಥೆಯ ವಿದ್ಯುತ್ ಉಪ ಸಮಿತಿ ಚೇರಮನ್ ಉದಯರವಿ ಸ್ವಾಗತಿಸುವ ಮೂಲಕ ಎಚ್.ಟಿ. ಗ್ರಾಹಕರ ತೊಂದರೆಗಳು ಸಾಕಷ್ಟು ಇದ್ದು ಅವುಗಳನ್ನು ಪರಿಹರಿಸಿಕೊಡಬೇಕೆಂದು ಅಧಿಕಾರಿಗಳಿಗೆ ತಿಳಿಸಿದರು.

ಸಂಸ್ಥೆಯ ಸಹ ಗೌರವ ಕಾ ೦ ು ್ ು ದ ' ಶಿ ್ ಗ ' ಳಾ ದ ರಾಘವೇಂದ್ರ ಎಸ್.ಕಾಲವಾಡ ಕಾರ್ಯಕ್ರಮ ನಿರೂಪಿಸಿದರು. ಸಂಸ್ಥೆಯ ಉಪಾಧ್ಯಕ್ಷರಾದ ಜಯದೇವ ಎಂ.ಮೆಣಸಗಿ ವಂದಿಸಿದರು. ಸಭೆಯಲ್ಲಿ ಸಂಸ್ಥೆಯ ಪದಾಧಿಕಾರಿಗಳು, ಆಡಳಿತ ಮಂಡಳಿ ಸದಸ್ಯರು, ಉದ್ದಿಮೆದಾರರು ಮತ್ತು ಹೆಸ್ಕಾಂ ಅಧಿಕಾರಿಗಳು ಪಾಲ್ಗೊಂಡಿದ್ದರೆಂದು ಸಂಸ್ಥೆಯ ಗೌರವ ಕಾರ್ಯದರ್ಶಿ ಚನ್ನವೀರಪ್ಪ ಪ್ರಭಣ್ಣ ಹುಣಸಿಕಟ್ಟಿ ತಿಳಿಸಿದ್ದಾರೆ.

## ಹಾಸ್ಟೆಲ್‌ಗಳಿಗೆ ಅನಧಿಕೃತ ಪ್ರವೇಶಕ್ಕೆ ಕಟ್ಟುನಿಟ್ಟಿನ ನಿರ್ಬಂಧ

**■ವಿಜಯಸಾಕ್ಷಿ ಸುದ್ದಿ, ಗದಗ**

ಕರ್ನಾಟಕ ಸಮಾಜ ಕಲ್ಯಾಣ ಇಲಾಖೆ ವ್ಯಾಪ್ತಿಯಲ್ಲಿರುವ ವಿದ್ಯಾರ್ಥಿ ನಿಲಯಗಳಿಗೆ ಅನಧಿಕೃತ ವ್ಯಕ್ತಿಗಳ ಪ್ರವೇಶವನ್ನು ಕಟ್ಟುನಿಟ್ಟಾಗಿ ನಿರ್ಬಂಧಿಸಲಾಗಿದೆ.

ಸರ್ಕಾರಿ ಅಧಿಕಾರಿಗಳು ಹಾಗೂ ಸರ್ಕಾರದ ಚುನಾಯಿತ ಜನಪ್ರತಿನಿಧಿಗಳನ್ನು ಹೊರತುಪಡಿಸಿ, ಇತರೆ ಯಾವುದೇ ವ್ಯಕ್ತಿಗಳು ಜಿಲ್ಲಾ ಮಟ್ಟದ ಉಪನಿರ್ದೇಶಕರ ಅಥವಾ ಸಂಬಂಧಪಟ್ಟ ತಾಲೂಕಿನ ಸಹಾಯಕ ನಿರ್ದೇಶಕರ ಲಿಖಿತ ಅನುಮತಿಯೊಂದಿಗೆ ಮಾತ್ರ ಸೀಮಿತ ಅವಧಿಗೆ ವಿದ್ಯಾರ್ಥಿ ನಿಲಯ ಪ್ರವೇಶಿಸಬಹುದು ಎಂದು ತಿಳಿಸಲಾಗಿದೆ.

ಬಾಲಕಿಯರ ವಿದ್ಯಾರ್ಥಿ ನಿಲಯಗಳಿಗೆ ಭೇಟಿ ನೀಡುವ ಸಂದರ್ಭದಲ್ಲಿ, ಅನುಮತಿ ಪಡೆದ ವ್ಯಕ್ತಿಯು ಕಡ್ಡಾಯವಾಗಿ ಮಹಿಳಾ ಅಧಿಕಾರಿಗಳೊಂದಿಗೆ ಮಾತ್ರ ಭೇಟಿ ನೀಡಬೇಕಾಗಿದೆ ಎಂದು ಸೂಚಿಸಲಾಗಿದೆ.

ವಸತಿ ನಿಲಯಗಳ ಬಗ್ಗೆ ದೂರುಗಳು ಬಂದಲ್ಲಿ ಅಥವಾ ನಿಲಯಗಳ ಉತ್ತಮ ಕಾರ್ಯಚಟುವಟಿಕೆಗಳನ್ನು ಪರಿಶೀಲಿಸಲು ಸಮುದಾಯದ ಮುಖಂಡರು ಅಥವಾ ಮಾಧ್ಯಮ ಪ್ರತಿನಿಧಿಗಳು ಭೇಟಿ ನೀಡಲು ಬಯಸಿದಲ್ಲಿ, ಜಿಲ್ಲಾ ಮಟ್ಟದ ಅಧಿಕಾರಿಯ ಅಥವಾ ಸಂಬಂಧಪಟ್ಟ ತಾಲೂಕಿನ ಸಹಾಯಕ ನಿರ್ದೇಶಕರ ಲಿಖಿತ ಅನುಮತಿ ಪಡೆದು, ಇಲಾಖೆಯ ತಾಲೂಕು ಮಟ್ಟದ ಅಧಿಕಾರಿ ಅಥವಾ ಸಿಬ್ಬಂದಿಯೊಂದಿಗೆ ಮಾತ್ರ ಸೀಮಿತ ಅವಧಿಗೆ ಪ್ರವೇಶ ಪಡೆಯಬಹುದು.

ಇದನ್ನು ಹೊರತುಪಡಿಸಿ ಯಾವುದೇ ಅನ್ಯ ವ್ಯಕ್ತಿ ನಿಲಯಕ್ಕೆ ಪ್ರವೇಶಿಸಿದರೆ, ಅದನ್ನು ಅತಿಕ್ರಮ ಪ್ರವೇಶ ಎಂದು ಪರಿಗಣಿಸಿ ಕಾನೂನು ಕ್ರಮ ಕೈಗೊಳ್ಳಲಾಗುವುದು ಎಂದು ಸಮಾಜ ಕಲ್ಯಾಣ ಇಲಾಖೆಯ ಉಪನಿರ್ದೇಶಕಿ ಡಾ. ನಂದಾ ಹಣಬರಟ್ಟಿ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಧರ್ಮಸ್ಥಳ, ಮಂಗಳೂರಿಗೆ ನೇರ ಬಸ್ ಆರಂಭ



**■ವಿಜಯಸಾಕ್ಷಿ ಸುದ್ದಿ, ಗದಗ**

ಗದಗ ನಗರದ ಹೊಸ ಬಸ್ ನಿಲ್ದಾಣದಲ್ಲಿ ಶುಕ್ರವಾರ ಗದಗದಿಂದ ಧರ್ಮಸ್ಥಳ ಹಾಗೂ ಮಂಗಳೂರು ನಗರಕ್ಕೆ ನೇರ ಬಸ್ ಸಂಚಾರಕ್ಕೆ ಚಾಲನೆ ನೀಡಲಾಯಿತು.

ಗದಗ ಮಾರ್ಗವಾಗಿ ಹೊರಡುವ ಬಸ್ ಲಕ್ಷ್ಮೇಶ್ವರ, ಹಾವೇರಿ, ರಾಣೇಬೆನ್ನೂರು, ಹರಿಹರ, ಶಿವಮೊಗ್ಗ, ಕಡೂರು, ಉಡುಪಿ, ಚಿಕ್ಕಮಗಳೂರು, ಉಜಿರೆ, ಧರ್ಮಸ್ಥಳಕ್ಕೆ ತಲುಪುವ 2 ಬಸಗಳು ಪ್ರತಿದಿನ ಸಂಜೆ 7 ಗಂಟೆಗೆ ಗದಗ ಬಸ್ ನಿಲ್ದಾಣದಿಂದ ಹೊರಡಲಿದೆ. ಬಸ್‌ನ ಪ್ರಯಾಣದ ದರ 455 ರೂಪಾಯಿ ಇರುತ್ತದೆ.

ಗದಗ ಮಾರ್ಗವಾಗಿ ಹೊರಡುವ ಬಸ್ ಹುಬ್ಬಳ್ಳಿ, ಅಂಕೋಲಾ, ಕುಮಟಾ, ಹೊನ್ನಾವರ, ಭಟ್ಕಳ, ಕುಂದಾಪುರ, ಉಡುಪಿ, ಮಂಗಳೂರಿಗೆ ತಲುಪುವ 2 ಬಸ್‌ಗಳು ಪ್ರತಿದಿನ ಬೆಳಗ್ಗೆ 8 ಗಂಟೆಗೆ ಗದಗ ಬಸ್ ನಿಲ್ದಾಣದಿಂದ ಹೊರಡಲಿದ್ದು, ಬಸ್‌ನ ಪ್ರಯಾಣದ ದರ 472 ರೂಪಾಯಿ ಇರುತ್ತದೆ.

ಕಾರ್ಯಕ್ರಮದಲ್ಲಿ ಜಿಲ್ಲಾ ಗ್ಯಾರಂಟಿ ಯೋಜನೆಗಳ ಅನುಷ್ಠಾನ ಸಮಿತಿ ಅಧ್ಯಕ್ಷ ಬಿ.ಬಿ. ಅಸೂಟಿ, ಗ್ಯಾರಂಟಿ ಸಮಿತಿಯ ತಾಲೂಕಾಧ್ಯಕ್ಷ ಅಶೋಕ ಮಂದಾಲಿ, ನಗರಾಭಿವೃದ್ಧಿ ಪ್ರಾಧಿಕಾರದ ಅಧ್ಯಕ್ಷ ಅಕ್ಬರಸಾಬ್ ಬಬರ್ಚಿ, ಗ್ಯಾರಂಟಿ ಸಮಿತಿ ಸದಸ್ಯರಾದ ಕೆ.ಎಚ್. ಪಾಟೀಲ್, ಮೀನಾಕ್ಷಿ ಬೆನಕಣ್ಣವರ, ಸಾವಿತ್ರಿ ಹೂಗಾರ, ಗದಗ ವಿಭಾಗೀಯ ನಿಯಂತ್ರಣಾಧಿಕಾರಿ ಪರಶುರಾಮ್ ವೈ.ಗಡೆದ, ವಿಭಾಗೀಯ ತಾಂತ್ರಿಕ ಶಿಲ್ಪಿ ಚಂದ್ರಶೇಖರ ಇಟಗಿ, ವಿಭಾಗೀಯ ಸಂಚಾರಾಧಿಕಾರಿ ಪಿ.ವಿ. ಮೆತ್ರಿ, ಗದಗ ಡಿಪೋ ಮ್ಯಾನೇಜರ್ ಬಿ.ಎಲ್. ಗೆನ್ನೂರು, ಬೆಟಗೇರಿ ಡಿಪೋ ಮ್ಯಾನೇಜರ್ ರೋಹಿಣಿ ಆರ್.ಬಿ, ನಿಲ್ದಾಣಾಧಿಕಾರಿ ಎಂ.ಬಿ. ತಿಮ್ಮನಗೌಡ್ರು, ಸಾರಿಗೆ ನಿಯಂತ್ರಕರಾದ ಎಸ್.ಎಫ್. ಸಂಗಣ್ಣನವರ, ಎ.ಎಸ್. ಅಂಗಡಿ, ಬಿ.ಎನ್. ಪಾಟೀಲ್, ಎಸ್.ಎನ್. ಕಡೆಮನಿ ಉಪಸ್ಥಿತರಿದ್ದರು.

VIJAYA SAKSHI KANNADA DAILY MORNING Editor, Printer, Publisher, & Owned by : Hussainsab M. Shareefanavar, H.No. 130/154, Balaji Nagar, Near Ring Road, Gadag-582103, Dist : Gadag- Karnataka Printed at : Sai Printing Press, Near Joda Maruti Temple, Gadag-582101, Dist : Gadag- Karnataka